ಭಾನುವರ 07.12.2025
ಬೆಂಗಳೂರು, ಬೆಲೆ: 5ರೂ,
2 ಪುಟಗಳು
ಸಂಪುಟ 01 - ಸಂಚಿಕೆ 117
Digital Varthe Kannada Daily
Volume 01 - Issue 117
Sunday 07.12.2025
Price: 5/- Rs
2 Pages Bangalore

PRGI/RNI: KNKAN/25/A1348

# ಡಿಜಿಟಲ್ ವಾರ್ತೆ

ಕನ್ನಡ ದಿನಪತ್ರಿಕೆ
ಕನ್ನಡಿಗರ ಶಕ್ತಿ

DIGITAL VARTHE
digitalvarthe@gmail.com
www.digitalvarthe.com

## ಪಿಹೆಚ್‌ಡಿ ವಿದ್ಯಾರ್ಥಿನಿ ಆತ್ಮಹತ್ಯೆ ಯತ್ನ ಕೇಸ್: ಸಿಂಡಿಕೇಟ್ ಸಭೆಯಲ್ಲಿ ಮಹತ್ವದ ತೀರ್ಮಾನ




**ಬೆಳಗಾವಿ:** ಪಿಹೆಚ್‌ಡಿ ಪದವಿ ನೀಡದ ಹಿನ್ನೆಲೆ ವಿದ್ಯಾರ್ಥಿನಿ ಆತ್ಮಹತ್ಯೆಗೆ ಯತ್ನ ಪ್ರಕರಣ ಸಂಬಂಧ ಘಟನೆ ಬಗ್ಗೆ ಚರ್ಚಿಸಲು ವಿಶೇಷ ಸಿಂಡಿಕೇಟ್ ಸಭೆ ಕರೆಯಲಾಗಿತ್ತು. ಈ ಸಭೆಯಲ್ಲಿ ಎರಡು ಮಹತ್ವದ ತೀರ್ಮಾನ ಕೈಗೊಳ್ಳಲಾಗಿದೆ ಎಂದು ಬೆಳಗಾವಿಯಲ್ಲಿ ರಾಣಿ ಚೆನ್ನಮ್ಮ ವಿಶ್ವ ವಿದ್ಯಾಲಯದ ಕುಲಪತಿ ತ್ಯಾಗರಾಜ್ ಹೇಳಿದ್ದಾರೆ.

4 ದಿನದ ಹಿಂದೆ ಮಾತ್ರೆ ಸೇವಿಸಿ ವಿದ್ಯಾರ್ಥಿನಿ ಆತ್ಮಹತ್ಯೆಗೆ ಯತ್ನಿಸಿದ್ದ ಬೆನ್ನಲ್ಲೇ ವಿಶ್ವ ವಿದ್ಯಾಲಯ ಸಿಂಡಿಕೇಟ್ ಸಭೆ ಕರೆದು ಮಹತ್ವದ ತೀರ್ಮಾನ ಕೈಗೊಂಡಿದೆ. ಸಿಂಡಿಕೇಟ್ ಸಭೆ ತೀರ್ಮಾನ ಏನು?

ಪಿಹೆಚ್‌ಡಿ ಪದವಿ ಪಡೆಯಲು ಆತ್ಮಹತ್ಯೆಗೆ ಯತ್ನಿಸಿದ್ದ ವಿದ್ಯಾರ್ಥಿನಿ ಅರ್ಹ ಆಗಿದ್ದಾರೆ. ಹೀಗಾಗಿ ನಿಯಮಾನುಸಾರ ಅರ್ಜಿ ಸಲ್ಲಿಸಿದ್ರೆ ಪಿಹೆಚ್‌ಡಿ ಪದವಿ ನೀಡುತ್ತೇವೆ. ಕಿರುಕುಳ ಆರೋಪ ಹಿನ್ನೆಲೆಯಲ್ಲಿ ಪ್ರಾಧ್ಯಾಪಕ ಕೆ.ಎಲ್.ಎನ್. ಮೂರ್ತಿಗೆ ಕಡ್ಡಾಯ ನಿವೃತ್ತಿಗೆ ಆದೇಶ ಮಾಡಲಾಗಿದೆ.

ವಿದ್ಯಾರ್ಥಿಗಳ ಜೊತೆ ಹೇಗೆ ನಡೆದುಕೊಳ್ಳಬೇಕು ಎಂಬ ನಿಯಮ ಇದ್ದು, ಇದನ್ನು ಪಾಲಿಸದ ಹಿನ್ನೆಲೆ ಕಡ್ಡಾಯ ನಿವೃತ್ತಿ ನೀಡಲು ಸಭೆ ತೀರ್ಮಾನ ಮಾಡಿದೆ ಎಂದು ಬೆಳಗಾವಿಯ ವಾರ್ತಾ ಭವನದಲ್ಲಿ ಸಿ.ಎಂ.ತ್ಯಾಗರಾಜ್ ತಿಳಿಸಿದ್ದಾರೆ. ವಿದ್ಯಾರ್ಥಿನಿ ಆರೋಪ ಏನಾಗಿತ್ತು? ಉದ್ದೇಶಪೂರ್ವಕವಾಗಿ ಪಿಎಚ್‌ಡಿ ಪದವಿ ನೀಡದೆ ಸತಾಯಿಸಲಾಗುತ್ತಿದೆ ಎಂದು ಆರೋಪಿಸಿ ರಾಣಿ ಚನ್ನಮ್ಮ ವಿಶ್ವವಿದ್ಯಾಲಯದಲ್ಲಿ ಪಿಎಚ್‌ಡಿ ಮಾಡುತ್ತಿದ್ದ ವಿದ್ಯಾರ್ಥಿನಿಯೊಬ್ಬರು ಮನೆಯಲ್ಲೇ ಆತ್ಮಹತ್ಯೆಗೆ ಯತ್ನಿಸಿದ್ದಾರೆ. 19ಕ್ಕೂ ಅಧಿಕ ಮಾತ್ರೆಗಳನ್ನು ಸೇವಿಸಿದ್ದ ಅವರನ್ನು ತಕ್ಷಣ ಬೆಳಗಾವಿಯ ಬಿಮ್ಸ್ ಆಸ್ಪತ್ರೆಗೆ ದಾಖಲಿಸಿ ತುರ್ತು ಚಿಕಿತ್ಸೆ ಕೊಡಿಸಲಾಗಿತ್ತು.ಗೈಡ್ ಕೆ.ಎಲ್. ಎನ್. ಮೂರ್ತಿ ಲೈಂಗಿಕ ಕಿರುಕುಳ ನೀಡಿದ್ದ ವಿಚಾರವಾಗಿ ಕುಲಪತಿಯವರಿಗೆ ಹಾಗೂ ರಿಜಿಸ್ಟ್ರಾರ್‌ಗೆ ವಿದ್ಯಾರ್ಥಿನಿ ದೂರು ನೀಡಿದ್ದರು. ನಂತರ ಗೈಡ್ ಸಂಬಂಧಿತ ಸಮಸ್ಯೆ ಬಗೆಹರಿಸಲಾಗಿತ್ತು. ಆದರೂ ತಮ್ಮನ್ನು ಟಾರ್ಗೆಟ್ ಮಾಡಿ ಪಿಎಚ್‌ಡಿ ನೀಡಿಲ್ಲ ಎಂದು ವಿದ್ಯಾರ್ಥಿನಿ ಆರೋಪಿಸಿದ್ದರು.


ಘಟನೆ ಬೆನ್ನಲ್ಲೇ ಸುದ್ದಿಗೋಷ್ಠಿ ನಡೆಸಿದ್ದ ರಾಣಿ ಚನ್ನಮ್ಮ ವಿವಿ ಕುಲಪತಿ ಸಿ.ಎಂ ತ್ಯಾಗರಾಜ್, ಇತಿಹಾಸ ವಿಭಾಗದಲ್ಲಿ 2021ರಲ್ಲಿ ವಿದ್ಯಾರ್ಥಿನಿ ಆರಂಭಿಸಿದ್ದ ಸಂಶೋಧನೆ 2025ರಲ್ಲಿ ಪೂರ್ಣ ಆಗಿದೆ. ಪ್ರಾಧ್ಯಾಪಕರ ಮೇಲೆ ವಿದ್ಯಾರ್ಥಿನಿ ಕಿರುಕುಳ ಆರೋಪ ಮಾಡಿದ್ದು, ಸಿಂಡಿಕೇಟ್‌ನಲ್ಲಿ ವಿಚಾರ ಮುಂದಿಟ್ಟು ವರದಿ ನೀಡಲು ಸೂಚಿಸಲಾಗಿತ್ತು. ಆಗ ಪ್ರಾಧ್ಯಾಪಕ ಕಿರುಕುಳ ನೀಡಿದ್ದು ಪ್ರಾಥಮಿಕವಾಗಿ ತಿಳಿದುಬಂದಿತ್ತು.

ಹೀಗಾಗಿ ಅವರನ್ನು ಕೆಲಸದಿಂದ ವಜಾ ಮಾಡಲಾಗಿತ್ತು. ಇದಾದ ಬಳಿಕ ವಿದ್ಯಾರ್ಥಿನಿ ದೂರು ವಾಪಾಸ್ ಪಡೆದಿದ್ದಳು. ಇಷ್ಟಾದರೂ ಮತ್ತೊಮ್ಮೆ ಸಿಂಡಿಕೇಟ್‌ನಲ್ಲಿ ಚರ್ಚೆ ಮಾಡಿ ಪ್ರಮಾಣ ಪತ್ರ ನೀಡಲು ಮುಂದಾಗಿದ್ದೆವು. ತೀರ್ಮಾನ ಆಗದ ಹಿನ್ನೆಲೆ ಘಟಿಕೋತ್ಸವದಲ್ಲಿ ಅವರಿಗೆ ಪಿಎಚ್‌ಡಿ ಪದವಿ ನೀಡಲು ಆಗಲಿಲ್ಲ. ತುರ್ತು ಸಿಂಡಿಕೇಟ್ ಸಭೆ ಕರೆಯಲಾಗಿದ್ದು,ಅದರಲ್ಲಿ ಈ ಬಗ್ಗೆ ತೀರ್ಮಾನ ಮಾಡೋದಾಗಿ ತಿಳಿಸಿದ್ದರು.

## ಮಾರಾಕಾಸ್ತ್ರಗಳಿಂದ ಕೊಚ್ಚಿ ಯುವಕನ ಹತ್ಯೆ

**ದೊಡ್ಡಬಳ್ಳಾಪುರ** : ಆಟೋದಲ್ಲಿ ಬರುತ್ತಿದವನನ್ನ ಅಡ್ಡಗಟ್ಟಿದ ದುಷ್ಕರ್ಮಿಗಳ ಗ್ಯಾಂಗ್, ಮಾರಾಕಾಸ್ತ್ರಗಳಿಂದ ಕೊಚ್ಚಿ ಕೊಲೆಗೈದಿದೆ, ಸ್ಥಳಕ್ಕೆ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಸಿ.ಕೆ.ಬಾಬಾ ಭೇಟಿ ನೀಡಿ ಪರಿಶೀಲನೆ ನಡೆಸಿದ್ದು, ಆರೋಪಿಗಳ ಪತ್ತೆಗಾಗಿ ಪೊಲೀಸರು ಬಲೆ ಬಿಸಿದ್ದಾರೆ.

ದೊಡ್ಡಬಳ್ಳಾಪುರ ನಗರದ ಯಲಹಂಕ-ಹಿಂದೂಪುರ ರಸ್ತೆಯ ಚರ್ಚ್ ಮುಂಭಾಗದಲ್ಲಿ ಕಳೆದ ರಾತ್ರಿ 10 ಗಂಟೆ ಸುಮಾರಿಗೆ ಘಟನೆ ನಡೆದಿದ್ದು, ಘಟನೆಯಲ್ಲಿ ಪವನ್ ಕುಮಾರ್ (30) ಕೊಲೆಯಾಗಿದೆ, ದೊಡ್ಡಬಳ್ಳಾಪುರ ನಗರ ಪೊಲೀಸ್ ಠಾಣೆಯ ಪೊಲೀಸರು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ, ಡಿವೈಎಸ್ಪಿ ಪಾಡುರಂಗ ಮತ್ತು ನಗರ ಠಾಣೆ ಪೊಲೀಸ್ ಠಾಣೆ ಇನ್ಸ್‌ಪೆಕ್ಟರ್ ಅಮರೇಶಗೌಡ ಸ್ಥಳಕ್ಕೆ ಭೇಟಿ ನೀಡಿ ಮಾಹಿತಿ ಕಲೆ ಹಾಕಿದ್ದಾರೆ.



ಮೃತ ವ್ಯಕ್ತಿ ಜಾಲಪ್ಪ ಕಾಲೇಜ್ ನಲ್ಲಿ ಡ್ರೈವರ್ ಕೆಲಸ ಮಾಡುತ್ತಿದ್ದ, ಕಾಲೇಜ್ ನ ವಸತಿ ಗೃಹದಲ್ಲಿ ತನ್ನ ತಾಯಿ ಜೊತೆ ವಾಸವಾಗಿದ್ದ, ನಿನ್ನೆ ರಾತ್ರಿ 9 ಗಂಟೆ ಸಮಯದಲ್ಲಿ ಪೋನ್ ಮಾಡಿ ಹೊರಗೆ ಕರೆಸಿಕೊಂಡಿದ್ದಾರೆ,


ಆಟೋದಲ್ಲಿ ಬರುತ್ತಿದ್ದ ವೇಳೆ ಕಾರಿನಲ್ಲಿ ಬಂದ ದುಷ್ಕರ್ಮಿಗಳ ಗ್ಯಾಂಗ್ ಆಟೋವನ್ನ ಅಡ್ಡಗಟ್ಟಿದ್ದಾರೆ. ಮಾರಾಕಾಸ್ತ್ರಗಳಿಂದ ಹಲ್ಲೆ ನಡೆಸಿ ಪರಾರಿಯಾಗಿದ್ದಾರೆ. ಸ್ಥಳದಲ್ಲೇ ಆತ ಸಾವನ್ನಪ್ಪಿದ್ದಾನೆ .

ಮೃತ ಯುವಕನ ಚಿಕ್ಕಮ್ಮ ಅನಿತಾರವರ ಹೇಳಿಕೆಯಂತೆ, ಯುವತಿಯನ್ನ ಪ್ರೀತಿ ಮಾಡುತ್ತಿದ್ದ, ಈ ವಿಚಾರಕ್ಕೆ ಗಲಾಟೆ ಸಹ ಆಗಿತ್ತು, ಬೇರೆಯಾಗಿದ್ರು, ಇತ್ತೀಚೆಗೆ ಇಬ್ಬರು ಜೊತೆಯಲ್ಲಿರುವ ಬಗ್ಗೆ ಮಾಹಿತಿ ಇತ್ತು. ಇದೇ ವಿಚಾರಕ್ಕೆ ಕೊಲೆ ಮಾಡಿರುವ ಸಂಶಯ ಇದೆ. ನಮ್ಮ ಅಕ್ಕನ ಗಂಡ, ಚಿಕ್ಕ ಮಗ ಸಾವನ್ನಪ್ಪಿದ್ದಾರೆ, ಜಾಲಪ್ಪ ಕಾಲೇಜ್ ನಲ್ಲಿ ಕೆಲಸ ಮಾಡುತ್ತಿದ್ದ ಆಕೆ ಮಗನ ಜೊತೆಯಲ್ಲಿ ವಾಸವಾಗಿದ್ದಳು,

ಈಗ ಇದ್ದ ಒಬ್ಬನೇ ಮಗನ ಕೊಲೆಯಾಗಿದೆ, ನಮ್ಮ ಅಕ್ಕ ಹೇಗೆ ಈ ನೋವು ಸಹಿಸಿಕೊಳ್ಳುತ್ತಾಳೋ ಗೊತ್ತಿಲ್ಲ ಎಂದು ತಮ್ಮ ನೋವು ತೊಂಡಿಕೊಂಡರು. ಕೊಲೆ ಪ್ರಕರಣ ಸಂಬಂಧ ಪ್ರತಿಕ್ರಿಯೆ ನೀಡಿದ ದೊಡ್ಡಬಳ್ಳಾಪುರ ನಗರ ಪೊಲೀಸ್ ಠಾಣೆಯ ಇನ್ಸ್‌ಪೇಕ್ಟರ್ ಅಮರೇಶಗೌಡ, ಪ್ರಕರಣ ಸಂಬಂಧ ಎಲ್ಲಾ ದಿಕ್ಕುಗಳಿಂದಲೂ ತನಿಖೆ ಮಾಡಲಾಗುತ್ತಿದೆ, ಮೃತನ ಕುಟುಂಬದವರು ಸಂಶಯ ಪಟ್ಟಂತೆಯೂ ತನಿಖೆ ನಡೆಸಲಾಗುತ್ತಿದೆ, ಸ್ಥಳದಲ್ಲಿ ಸಿಸಿ ಕ್ಯಾಮಾರ ಇಲ್ಲ, ಮರಗಳ ನೆರಳಿನಲ್ಲಿ ಕೃತ್ಯ ನಡೆದಿರುವುದರಿಂದ ಆರೋಪಿಗಳ ಸುಳಿವು ಲಭ್ಯವಾಗಿಲ್ಲ. ಆರೋಪಿಗಳ ಪತ್ತೆಗಾಗಿ ಪೊಲೀಸ್ ತಂಡ ಬೆನ್ನತ್ತಿದ್ದು ಆರೋಪಿಗಳ ಪತ್ತೆ ಮಾಡುವುದ್ದಾಗಿ ತಿಳಿಸಿದರು.



## ವಕೀಲ ಬೋರೇಗೌಡರ ಕಛೇರಿಗೆ ನುಗ್ಗಿ ದಾಂಧಲೆ ನಡೆಸಿ ಮಾರಣಾಂತಿಕ ಹಲ್ಲೆ



ಕೃಷ್ಣರಾಜಪೇಟೆ ಷ್ಣರಾಜಪೇಟೆ ಪಟ್ಟಣದ ಮೈಸೂರು ರಸ್ತೆಯ ದಲಿತ ಶಿಕ್ಷಣ ಅಭಿವೃದ್ಧಿ ಸಂಸ್ಥೆಯ ವಾಣಿಜ್ಯ ಕಟ್ಟಡದಲ್ಲಿರುವ ವಕೀಲ ಕೆ.ಬೋರೇಗೌಡ ಅವರ ಕಛೇರಿಗೆ ನುಗ್ಗಿ ದಾಂಧಲೆ ನಡೆಸಿ, ಪೀಠೋಪಕರಣಗಳನ್ನು ಧ್ವಂಸ ಮಾಡಿ, ಮಾರಣಾಂತಿಕವಾಗಿ ಹಲ್ಲೆ ನಡೆಸಿರುವ ವಕೀಲರ ಸಂಘದ ಅಧ್ಯಕ್ಷ ಎಂ.ಆರ್.ನಾಗೇಗೌಡ, ಕಾರ್ಯದರ್ಶಿ ಸಾಧುಗೋನಹಳ್ಳಿ ಮಂಜೇಗೌಡ, ಖಜಾಂಚಿ ಪ್ರಸನ್ನ ಕುಮಾರ್ ಹಾಗೂ ವಕೀಲರ ಸಂಘದ ಪದಾಧಿಕಾರಿಗಳಾದ ಜಗದೀಶ್ ಮತ್ತು ಅನ್ವೇಶ್ ಅವರ ವಿರುದ್ಧ ಕೂಡಲೇ ಕಾನೂನು ಕ್ರಮ ಕೈಗೊಂಡು ಬಂಧಿಸಿ ಜೈಲಿಗೆ ಕಳಿಸಬೇಕು ಎಂದು ಎಂದು ಆಗ್ರಹಿಸಿ ನೂರಾರು ನಾಗರೀಕರು ಇಂದು ಪಟ್ಟಣದ ಪ್ರವಾಸಿ ಮಂದಿರದ ಆವರಣದಲ್ಲಿ ಪತ್ರಿಕಾಗೋಷ್ಠಿ ನಡೆಸಿ ಪ್ರತಿಭಟನೆ ಮಾಡಿದರು.

ಗವಿರಂಗನಾಥ ಸ್ವಾಮಿ ದೇವಾಲಯದ ಆವರಣದಲ್ಲಿ ಗೂಡ್ಸ್ ಟೆಂಪೋ ಹರಿದು ಸಾರಂಗಿ ಗ್ರಾಮದ ಇಬ್ಬರು ಮಹಿಳೆಯರು ಅಪಘಾತದಲ್ಲಿ ನಿಧನರಾದ ಕೇಸನ್ನು ಪಡೆದುಕೊಳ್ಳುವ ವಿಚಾರದಲ್ಲಿ ನಾಗೇಗೌಡ ಅವರು ಏಕಾಏಕಿ ಬೋರೇಗೌಡರ ಕಚೇರಿಗೆ ನುಗ್ಗಿ ನನಗೆ ಬಂದಿರುವ ಅಪಘಾತದ ಕೇಸನ್ನು ನೀನು ಏಕೆ ತೆಗೆದುಕೊಳ್ಳುತ್ತೀಯ ನನ್ನ ತಂಟೆಗೆ ಬಂದರೆ ನಿನ್ನನ್ನು ಮುಗಿಸಿ ಬಿಡುತ್ತೇನೆ ಎಂದು ಕೊಲೆ ಬೆದರಿಕೆ ಹಾಕಿದ್ದಲ್ಲದೆ ಬೋರೇಗೌಡರ ಕಚೇರಿಯಲ್ಲಿದ್ದ ಕಂಪ್ಯೂಟರ್, ಲ್ಯಾಪ್ಟಾಪ್ ಸೇರಿದಂತೆ ಪೀಠೋಪಕರಣಗಳನ್ನು ಧ್ವಂಸ ಮಾಡಿ, ಚಾಕುವಿನಿಂದ ಕೈ ಕಾಲುಗಳಿಗೆ ಇರಿದು, ಬೋರೇಗೌಡರ ಮೇಲೆ ಮಾರಣಾಂತಿಕವಾಗಿ ಹಲ್ಲೆ ಮಾಡಿ, ಕೊಲೆ ಬೆದರಿಕೆ ಹಾಕಿ ಹೋಗಿ ಎರಡು ದಿನಗಳು ಕಳೆಯುತ್ತಿದ್ದರೂ, ಕೇವಲ ಎಫ್.ಐ.ಆರ್ ಹಾಕಿ ಕೈ ತೊಳೆದುಕೊಂಡಿರುವ ಕೃಷ್ಣರಾಜಪೇಟೆ ಪಟ್ಟಣ ಪೊಲೀಸರು ಈವರೆಗೆ ಆರೋಪಿಗಳನ್ನು ಬಂಧಿಸಿ ಜೈಲಿಗೆ ಕಳಿಸಿಲ್ಲ. ವಕೀಲರ ಸಂಘದ ಅಧ್ಯಕ್ಷ ನಾಗೇಗೌಡ, ಕಾರ್ಯದರ್ಶಿ ಮಂಜೇಗೌಡ, ಖಜಾಂಚಿ ಪ್ರಸನ್ನ ಕುಮಾರ್ ಸೇರಿದಂತೆ ಪದಾಧಿಕಾರಿಗಳಾದ ಅನ್ವೇಶ್ ಹಾಗೂ ಜಗದೀಶ್ ಕೃಷ್ಣರಾಜಪೇಟೆ ಪಟ್ಟಣದಲ್ಲಿಯೇ ರಾಜಾರೋಷವಾಗಿ ಓಡಾಡುತ್ತಿದ್ದಾರೆ. ನಾಗೇಗೌಡ ಅವರು ನಡೆಸಿರುವ ಮಾರಣಾಂತಿಕ ದಾಳಿಯಿಂದ ಕಂಗಾಲಾಗಿರುವ ಬೋರೇಗೌಡ ಅವರು ಕೆ.ಆರ್.ಪೇಟೆ ಪಟ್ಟಣದ ಖಾಸಗಿ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆದುಕೊಂಡು ಸಾವು ಬದುಕಿನ ನಡುವೆ ಹೋರಾಟ ನಡೆಸಿದ್ದಾರೆ.

ಇಷ್ಟಾದರೂ ಪೊಲೀಸರು ನಮಗೂ ಈ ಘಟನೆಗೂ ಯಾವುದೇ ಸಂಬಂಧವಿಲ್ಲ ಎಂಬಂತೆ ಬೇಜವಾಬ್ದಾರಿಯಿಂದ ವರ್ತಿಸುತ್ತಿರುವುದಲ್ಲದೆ ಆರೋಪಿಗಳನ್ನು ಬಂಧಿಸಲು ಮುಂದಾಗಿಲ್ಲ. ಆದ್ದರಿಂದ ಈ ಕೂಡಲೇ ಆರೋಪಿ ನಾಗೇಗೌಡ ಹಾಗು ಇತರೆ ನಾಲ್ವರು ಆರೋಪಿಗಳನ್ನು ಬಂಧಿಸಿ ಜೈಲಿಗೆ ಕಳಿಸಬೇಕು ಇಲ್ಲದಿದ್ದರೆ ನಾವು ಪೊಲೀಸ್ ಠಾಣೆಯ ಮುಂದೆ ಧರಣಿ ಸತ್ಯಾಗ್ರಹ ನಡೆಸಿ ಉಗ್ರವಾದ ಹೋರಾಟ ಮಾಡಬೇಕಾಗುತ್ತದೆ ಎಂದು ಕರವೇ ಜಿಲ್ಲಾಧ್ಯಕ್ಷ ಹೊನ್ನೇನಹಳ್ಳಿ ವೇಣು, ಕರವೇ ಜಿಲ್ಲಾ ಉಪಾಧ್ಯಕ್ಷ ಸಾಸಲು ಗುರುಮೂರ್ತಿ, ಎಸ್ ಡಿ ಪಿ ಐ ತಾಲೂಕು ಅಧ್ಯಕ್ಷ ಸಲಾಉದ್ದೀನ್, ಛಲವಾದಿ ಮಹಾಸಭಾದ ಜಿಲ್ಲಾಧ್ಯಕ್ಷ ಮಾಂಬಳ್ಳಿ ಜಯರಾಂ,

ಕೆ.ಆರ್.ಪೇಟೆ ತಾಲೂಕು ನಾಗರೀಕ ಹಿತರಕ್ಷಣ ಸಮಿತಿ ಅಧ್ಯಕ್ಷ ನಾಟನಹಳ್ಳಿ ಗಂಗಾಧರ, ದಲಿತ ಹಿತ ರಕ್ಷಣಾ ಸಮಿತಿಯ ಜಿಲ್ಲಾಧ್ಯಕ್ಷ ನಾಟನಹಳ್ಳಿ ಮಂಜುನಾಥ್, ರೈತ ಮಹಿಳೆ ವಳಗೆರೆ ಮೆಣಸದ ಲಲಿತ, ಬಳ್ಳೆಕೆರೆ ಧನಂಜಯ, ಕಾಮನಹಳ್ಳಿ ಚಂದ್ರೇಗೌಡ, ಜಕ್ಕನಹಳ್ಳಿ ನಂಜೇಗೌಡ ಆಗ್ರಹಿಸಿ ಧಿಕ್ಕಾರದ ಘೋಷಣೆಗಳನ್ನು ಕೂಗಿದರು. ಪ್ರತಿಭಟನೆಯಲ್ಲಿ ಮಿಲ್ಟ್ರಿ ಸುಕುಮಾರ್ ಕೈಗೊನಹಳ್ಳಿ ಗಂಗಾಧರ ಬಂಡಿಹೊಳೆ ರಮೇಶ್ , ವಳಗೆರೆ ಮೆಣಸ ಮೋಹನ್ ಕುಮಾರ್, ಧನಂಜಯ ಸೇರಿದಂತೆ 250ಕ್ಕೂ ಹೆಚ್ಚು ನಾಗರಿಕರು ಪ್ರತಿಭಟನೆ ಹಾಗೂ ಪೊಲೀಸ್ ಠಾಣೆಯ ಮುತ್ತಿಗೆ ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು.

## ಕಿಕ್ಕೇರಿ ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯ 2015ನೇ ಮದ್ಯವರ್ಜನಾ ಶಿಬಿರ:



ಕೃಷ್ಣರಾಜಪೇಟೆ: ತಾಲೋಕಿನ ಕಿಕ್ಕೇರಿ ಕುರುಹಿನಶೆಟ್ಟಿ ಸಮುದಾಯದಲ್ಲಿ ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ಅಖಿಲ ಕರ್ನಾಟಕ ಜನಜಾಗೃತಿ ವೇದಿಕೆ ಟ್ರಸ್ಟ್ ಕರ್ನಾಟಕ ರಾಜ್ಯ ಮದ್ಯಪಾನ ಸಂಯಮ ಮಂಡಳಿ, ಜ್ಞಾನ ವಿಕಾಸ ಕೇಂದ್ರ, ಮತ್ತಿತರ ಸಂಸ್ಥೆ ಸಹಕಾರದಲ್ಲಿ ಗುರುವಾರ ಹಮ್ಮಿಕೊಂಡಿದ್ದ 2015ನೇ ಮದ್ಯವರ್ಜನ ಶಿಬಿರದಲ್ಲಿ ಸಮಾಜದ ಹಾಗೂ ತಮ್ಮ ಆರೋಗ್ಯಕ್ಕಾಗಿ ದುಶ್ಚಟದಿಂದ ದೂರವಿದ್ದು ನವಜೀವನ ಸಾಗಿಸಿ ಎಂದು ಅಖಿಲ ಕರ್ನಾಟಕ ಜನಜಾಗೃತಿ ವೇದಿಕೆ ಟ್ರಸ್ಟ್ ಜಿಲ್ಲಾಧ್ಯಕ್ಷ ಆರ್‌ಟಿಒ ಮಲ್ಲಿಕಾರ್ಜುನ ತಿಳಿಸಿದರು.

ಇಲ್ಲಿನ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ಅಖಿಲ ಕರ್ನಾಟಕ ಜನಜಾಗೃತಿ ವೇದಿಕೆ ಟ್ರಸ್ಟ್ ಕರ್ನಾಟಕ ರಾಜ್ಯ ಮದ್ಯಪಾನ ಸಂಯಮ ಮಂಡಳಿ,ಜ್ಞಾನ ವಿಕಾಸ ಕೇಂದ್ರ, ಮತ್ತಿತರ ಸಂಸ್ಥೆ ಸಹಕಾರದಲ್ಲಿ ಗುರುವಾರ ಹಮ್ಮಿಕೊಂಡಿದ್ದ 2015ನೇ ಮದ್ಯವರ್ಜನ ಶಿಬಿರದಲ್ಲಿ ಮಾತನಾಡಿದರು.

ಕುಡಿತ ಬಿಟ್ಟಿರುವುದನ್ನು ಕಂಡು ಇವರ ಕುಟುಂಬದಲ್ಲಿ ಮೂಡಿದ ಆನಂದ ಸದಾ ಹೀಗೆ ಇರಲಿ. ಪೂಜ್ಯ ವೀರೇಂದ್ರ ಹೆಗ್ಗಡೆ ಅವರ ಸಾಧನೆ ಸಾರ್ಥಕತೆ ತಂದಿದೆ. ಕುಡಿತ ದೇಹ ಸುಡದೆ ಕುಟುಂಬ ,ಸಮಾಜವನ್ನು ಸುಡಲಿದೆ.ದುಡ್ಡು ಕೊಟ್ಟು ಮಾರ್ಯದೆ ,ಆರೋಗ್ಯ ಕಳೆದು ಕೊಂಡು ಸರ್ವನಾಶವಾಗಿಸುವ ಈ ಚಟದಿಂದ ಮುಕ್ತರಾಗಿಸಲು ಧರ್ಮಸ್ಥಳ ಯೋಜನೆ ಹಮ್ಮಿಕೊಂ ಡಿರುವ ಯೋಜನೆ ವಿಶ್ವವೇ ಮೆಚ್ಚುವಂತಿದೆ ಎಂದರು.

ಕಾಪನಹಳ್ಳಿ ಗವಿಮಠ ಪೀಠಾಧ್ಯಕ್ಷ ಸ್ವತಂತ್ರ ಚನ್ನವೀರ ಸ್ವಾಮೀಜಿ ಮಾತನಾಡಿ, ಮದ್ಯಪಾನ ಆರಂಭದಲ್ಲಿ ಶೋಕಿಗಾಗಿ ಆಹ್ವಾನಿಸಿ ತದನಂತರ ದೇಹ, ಮನಸ್ಸು, ಆರೋಗ್ಯ, ಕುಟುಂಬ ಎಲ್ಲವನ್ನು ಹಾಳು ಮಾಡಲಿದೆ. ಮದ್ಯದ ಅಮಲು ಅನೈತಿಕ, ಸಮಾಜಘಾತುಕ ಚಟುವಟಿಕೆಗೆ ಪ್ರೇರೇಪಿಸಲಿದೆ. ದೇಶದ ಬಹುದೊಡ್ಡ ಪಿಡುಗಾದ ಬಡತನ, ಅನಕ್ಷರತೆಗಿಂತಲೂ ದೊಡ್ಡ ಪಿಡುಗು ಇದಾಗಿದೆ. ಅಕಾಲಿಕ ಮೃತ್ಯುವಿನಿಂದ ಅನೇಕ ಕುಟುಂಬ ಬೀದಿಗೆ ಬಿದ್ದಿವೆ. ಮಕ್ಕಳ ಭವಿಷ್ಯ ಹಾಳಾಗಿದೆ ಎಂದು ಎಚ್ಚರಿಸಿದರು.

ಕೆಪಿಸಿಸಿ ಸದಸ್ಯ ಸುರೇಶ್ ಮಾತನಾಡಿ, ಹೊಸದಾಗಿ ಶಾಲೆಗಳು ಆರಂಭವಾಗುವ ಬದಲು ಹೆಚ್ಚು ಎಣ್ಣೆ ಅಂಗಡಿ ಆರಂಭವಾಗುತ್ತಿರುವುದು ಬೇಸರದ ಸಂಗತಿ. ಮದ್ಯಪಾನ ಬ್ರಿಟಿಷರು ತಂದಿರುವ ಸಂಸ್ಕೃತಿ. ನಮ್ಮ ದೇಶವನ್ನೇ ಸುಡುತ್ತಿರುವ ಕೆಟ್ಟ ಸಂಸ್ಕೃತಿಯಿಂದ ದೂರವಾಗಲು ಕುಡಿತ ಬಿಡಿ ನೆಮ್ಮದಿ ಬದುಕು ಕಟ್ಟಿಕೊಳ್ಳಿ ಎಂದು ಹೇಳಿದರು.

ಯೋಜನೆ ಜಿಲ್ಲಾ ನಿರ್ದೇಶಕ ಎ.ಯೋಗೇಶ್ ಮಾತನಾಡಿ, ಶಿಬಿರ 1982ರಲ್ಲಿ ಆರಂಭವಾಗಿದ್ದು, ಸುಮಾರು 1.5ಲಕ್ಷ ಮಂದಿ ಮದ್ಯವರ್ಜಿಸಿ ಪಾನಮುಕ್ತರಾಗಿ ನವಜೀವನ ಸಾಗಿಸುತ್ತಿ ದ್ದಾರೆ. ಕುಡಿತ ಕುಟುಂಬದ ಸಮಸ್ಯೆ ಆಗದೆ ಇಡೀ ಸಮಾಜದ ಪಿಡುಗಾಗಿದೆ. ಸಜ್ಜನ, ಸ್ವಾಸ್ಥ್ಯ ಸಮಾಜ ನಿರ್ಮಾಣಕ್ಕೆ ಮದ್ಯಪಾನದಂತಹ ದುಶ್ಚಟದಿಂದ ದೂರವಾಗಿ ಎಂದು ಮನವಿ ಮಾಡಿದರು.

ಕಿಕ್ಕೇರಿ ಯೋಜನಾಧಿಕಾರಿ ಪ್ರಸಾದ್ ಮಾತನಾಡಿ, ಮದ್ಯವರ್ಜಿಸಿ ನವಜೀವನಕ್ಕೆ ಮುಂದಾಗುವ ಸದಸ್ಯರಿಗೆ ಸ್ವಾವಲಂಬಿಯಾಗಿ ಬದುಕಲು ಸಂಸ್ಥೆಯ ಮಾರ್ಗದರ್ಶನ, ನೆರವು ಇದ್ದು ಸದ್ಬಳಕೆ ಮಾಡಿಕೊಳ್ಳಿ ಎಂದು ವಿನಂತಿಸಿದರು.

ತಾಲೂಕಿನ ವಿವಿಧ ಗ್ರಾಮಗಳಿಂದ ಶಿಬಿರದಲ್ಲಿ 36 ಜನರು ಮದ್ಯವ್ಯಸನಿಗಳು ಭಾಗವಹಿಸಿ ಕುಡಿತ ಬಿಟ್ಟು ನವಜೀವನ ಸಾಗಿಸುವುದಾಗಿ ಪ್ರತಿಜ್ಞೆ ಮಾಡಿದರು. ಪೂಜ್ಯ ವೀರೇಂದ್ರ ಹೆಗ್ಗಡೆ ತಮ್ಮ ಬದುಕಿಗೆ ದೇವರಾಗಿದ್ದಾರೆ ಎಂದು ನುಡಿದ ಕ್ಷಣವನ್ನು ಕಂಡು ಕುಟುಂಬದವರಲ್ಲಿ ಆನಂದ ಬಾಷ್ಪ ಮೂಡಿತು._

ಜನಜಾಗೃತಿ ವೇದಿಕೆ ನಿಕಟಪೂರ್ವ ಅಧ್ಯಕ್ಷ ಕೆ.ಎಸ್.ರಾಜೇಶ್, ಉಪಾಧ್ಯಕ್ಷೆ ನಳಿನಿ, ಕುರುಹಿನ ಶೆಟ್ಟಿ ಸಂಘದ ಅಧ್ಯಕ್ಷ ಸೂರ್ಯನಾರಾಯಣ್, ಸುನೀತಾ, ಸದಸ್ಯರಾದ ಮೊಟ್ಟೆ ಮಂಜು, ನಾರಾಯಣಸ್ವಾಮಿ, ಶಿವರಾಂ, ಕುಮಾರ್, ರಂಗೇಗೌಡ, ವಿಮಲಾ, ಮಧುಸೂದನ್, ಶಿವರಾಮು, ಮಣಿ, ಮೇಲ್ವಿಚಾರಿಕೆ ಯಶೋದಾ, ನವಜೀವನ ಸದಸ್ಯರು ಇದ್ದರು,

## ಭಾರತ ರತ್ನ ಡಾ. ಬಾಬಾಸಾಹೇಬ್ ಅಂಬೇಡ್ಕರ್ ಮಹಾಪರಿನಿರ್ವಾಣ ಪುಣ್ಯದಿನ ಆಚರಣೆ



**ಬೆಂಗಳೂರು:** ಸಂವಿಧಾನಶಿಲ್ಪಿ, ಭಾರತ ರತ್ನ ಡಾ. ಬಾಬಾಸಾಹೇಬ್ ಅಂಬೇಡ್ಕರ್ ರವರ ಮಹಾಪರಿನಿರ್ವಾಣ ಪುಣ್ಯದಿನದ ಅಂಗವಾಗಿ ಬಿಜೆಪಿ ರಾಜ್ಯ ಕಾರ್ಯಾಲಯ "ಜಗನ್ನಾಥ ಭವನದಲ್ಲಿ" ಇಂದು ಅವರ ಭಾವಚಿತ್ರಕ್ಕೆ ಪುಷ್ಪಾರ್ಚನೆ ಮೂಲಕ ಗೌರವ ಸಲ್ಲಿಸಿ ನಂತರ ಮಾಧ್ಯಮಗಳನ್ನು ಉದ್ದೇಶಿಸಿ ಮಾತನಾಡಿದ ಬಿಜೆಪಿ ರಾಜ್ಯಾಧ್ಯಕ್ಷ ಬಿ ವೈ ವಿಜಯೇಂದ್ರ ಯಡಿಯೂರಪ್ಪ ಮಾತ ನಾಡಿದ ಅವರು ಡಾ. ಅಂಬೇಡ್ಕರ್ ಅವರ ಸಾಮಾಜಿಕ ನ್ಯಾಯದ ಬದ್ಧತೆ ಮತ್ತು ಆದರ್ಶಗಳಿಂದ ಸ್ಫೂರ್ತಿ ಪಡೆಯುತ್ತಾ, ಅವರು ನೀಡಿದ ಶ್ರೇಷ್ಠ ಸಂವಿಧಾನದ ಆಧಾರದ ಮೇಲೆ, ಸಶಕ್ತ ಭಾರತ ನಿರ್ಮಾಣದ ನಿಟ್ಟಿನಲ್ಲಿ ನಾವೆಲ್ಲರೂ ಒಂದಾಗಿ ಮುನ್ನಡೆಯೋಣ ಎನ್ನುವ ಸದಾಶ ಯಗಳನ್ನು ವ್ಯಕ್ತಪಡಿ ಸಿದರು. ಈ ದೇಶಕ್ಕೆ ಮಹಾ ಗ್ರಂಥ ವನ್ನು ರಚಿಸಿ ಪ್ರತಿಯೊಬ್ಬರಿಗೆ ಬದುಕುವ ನಾಗರೀಕ ಹಕ್ಕುಗಳು ದೊರೆಯುವಂತೆ ಮಾಡಿದ ಭಾರತ ರತ್ನ ಸಂವಿಧಾನ ಶಿಲ್ಪ ಡಾ. ಭೀಮ್ ರಾವ್ ಅಂಬೇಡ್ಕರ್ ರವರು ಈ ದೇಶದ ಅಸ್ತಿ ಯಾಗಿದರೆ. ಆನಂದ್ ಸಿ ತಿರುಮಲ ರಾಜ್ಯ ಪ್ರಶಸ್ತಿ ವಿಜೇತರು ಬೆಂಗ ಳೂರು

ಈ ಸಂದರ್ಭದಲ್ಲಿ **ಹಿರಿಯ ನಾಯಕರು, ಮಾಜಿ ಉಪಮುಖ್ಯಮಂತ್ರಿಗಳು, ಹಾಲಿ ಸಂಸದರಾದ ಶ್ರೀ ಗೋವಿಂದ್ ಕಾರಜೋಳ, ಪಕ್ಷದ ಎಸ್.ಟಿ.ಮೋರ್ಚಾ ರಾಜ್ಯಾಧ್ಯಕ್ಷ ಶ್ರೀ ಬಂಗಾರು ಹನುಮಂತು, ಎಸ್.ಸಿ.ಮೋರ್ಚಾ ರಾಜ್ಯ ಉಪಾಧ್ಯಕ್ಷ ಶ್ರೀ ಹೂಡಿ ಮಂಜುನಾಥ್,**

**ಪಕ್ಷದ ರಾಜ್ಯ ಕಾರ್ಯದರ್ಶಿಗಳಾದ ಶ್ರೀಮತಿ ಲಕ್ಷ್ಮಿ ಅಶ್ವಿನ್ ಗೌಡ, ಮುಖಂಡರಾದ ಶ್ರೀ ಜಗದೀಶ್ ಹಿರೇಮನಿ, ಶ್ರೀ ವೆಂಕಟೇಶ ಮೌರ್ಯ,ರಾಜ್ಯ ಪ್ರಶಸ್ತಿ ವಿಜೇತ ಆನಂದ್ ಸಿ ತಿರುಮಲ, ಗೌತಮ್ ವೆಂಕಿ, ಸಂಗಮೇಶ, ರಂಗನಾಥ್, ಮುನಿಕುಮಾರ್, ಸುಮಲತಾ, ವೆಂಕಟರಮಣ ,ಅಶೋಕ, ಮತ್ತಿತರರು ಉಪಸ್ಥಿತರಿದ್ದರು.**

## ರಾಜ್ಯ ಸರ್ಕಾರದಿಂದ 2026ನೇ ಸಾಲಿನ ಸಾರ್ವತ್ರಿಕ ಹಾಗೂ ಪರಿಮಿತ ರಜಾ ದಿನಗಳ ಪಟ್ಟಿ

ಹಾಗಾದ್ರೇ 2026ನೇ ಸಾಲಿಗೆ ಮಂಜೂರಾದ ಸಾರ್ವತ್ರಿಕೆ ರಜಾ ದಿನಗಳು ಹಾಗೂ ಪರಿಮಿತ ರಜಾ ದಿನಗಳ ಅಧಿಕೃತ ಪಟ್ಟಿಯನ್ನು ಮುಂದಿದೆ ನೋಡಿ..

ಈ ಕುರಿತಂತೆ ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆಯ ಸರ್ಕಾರದ ಅಧೀನ ಕಾರ್ಯದರ್ಶಿಯವರು ಅಧಿಸೂಚನೆ ಹೊರಡಿಸಿದ್ದಾರೆ. 2026ನೇ ಸಾಲಿಗೆ ಮಂಜೂರು ಮಾಡಿರುವ ಸಾರ್ವತ್ರಿಕ ರಜಾ ದಿನಗಳ ಪಟ್ಟಿ ಸಾರ್ವಜನಿಕರಿಗಾಗಿ ಈ ಕೆಳಕಂಡಂತೆ ಪ್ರಕಟಿಸಲಾಗಿದೆ ಎಂದಿದ್ದಾರೆ.

ಪ್ರತಿ ತಿಂಗಳ ಎರಡನೇ ಶನಿವಾರ, ನಾಲ್ಕನೇ ಶನಿವಾರ ಮತ್ತು ಭಾನುವಾರ ರಜೆಯ ಜೊತೆಗೆ 20 ಸಾರ್ವತ್ರಿಕ ರಜೆ, 21ಪರಿಮಿತ ರಜೆ ನಿಗದಿಪಡಿಸಲಾಗಿದೆ.

ಫೆಬ್ರವರಿ 15 ಮಹಾಶಿವರಾತ್ರಿ, ಅಕ್ಟೋಬರ್ 25 ಮಹರ್ಷಿ ವಾಲ್ಮೀಕಿ ಜಯಂತಿ, ನವೆಂಬರ್ 1 ಕನ್ನಡ ರಾಜ್ಯೋತ್ಸವ, ನವೆಂಬರ್ 8 ನರಕ ಚತುರ್ದಶಿ ಹಬ್ಬ ಭಾನುವಾರ ಬಂದಿದ್ದರೆ, ಮಹಾಲಯ ಅಮಾವಾಸ್ಯೆ ಅಕ್ಟೋಬರ್ 10ರ ಎರಡನೇ ಶನಿವಾರ ಬಂದಿದೆ.

ಈ ಪಟ್ಟಿಯಲ್ಲಿರುವಂತೆ ಮುಸ್ಲಿಮರ ಹಬ್ಬಗಳು ನಿಗದಿತ ದಿನಾಂಕದಂದು ಆಚರಣೆಯಾಗದಿದ್ದರೆ ಸರ್ಕಾರಿ ಸೇವೆಯಲ್ಲಿರುವ ಮುಸ್ಲಿಂ ಸಮುದಾಯದವರಿಗೆ ನಿಗದಿತ ರಜೆಗೆ ಬದಲಾಗಿ ಹಬ್ಬದ ದಿನ ರಜೆ ಮಂಜೂರು ಮಾಡಲು ಅವಕಾಶ ಕಲ್ಪಿಸಲಾಗಿದೆ.

ಸೆಪ್ಟೆಂಬರ್ 3ರಂದು ಕೈಲ್ ಮುಹೂರ್ತ, ಅಕ್ಟೋಬರ್ 18ರಂದು ತುಲಾ ಸಕ್ರಮಣ, ನವೆಂಬರ್ 28ರಂದು ಹುತ್ತರಿ ಹಬ್ಬ ಆಚರಿಸಲು ಕೊಡಗು ಜಿಲ್ಲೆಗಷ್ಟೇ ಅನ್ವಯವಾಗುವಂತೆ ಸ್ಥಳೀಯ ಸಾರ್ವತ್ರಿಕ ರಜೆ ಘೋಷಿ ಸಲಾಗಿದೆ. ಶಿಕ್ಷಣ ಇಲಾಖೆಗೆ ಸಂಬಂಧಿಸಿದ ರಜೆಗಳಿಗೆ ಅನ್ವಯವಾಗುವಂತೆ ಪ್ರತ್ಯೇಕ ರಜಾ ದಿನಗಳ ಪಟ್ಟಿಯನ್ನು ಸಾರ್ವಜನಿಕ ಶಿಕ್ಷಣ ಇಲಾಖೆ ಆಯುಕ್ತರು ಹೊರಡಿಸಲಿದ್ದಾರೆ.

ಸಾರ್ವತ್ರಿಕ ರಜಾ ದಿನಗಳ ಜೊತೆಗೆ ಸರ್ಕಾರಿ ನೌಕರರು ಎರಡು ದಿನಗಳಿಗೆ ಮೀರದಂತೆ 2026 ನೇ ಸಾಲಿನ ವರ್ಷಕ್ಕೆ ಘೋಷಿಸಿದ ಪರಿಮಿತ ರಜೆಯನ್ನು ಪೂರ್ವ ಅನುಮತಿ ಪಡೆದು ಬಳಸಿಕೊಳ್ಳಬಹುದು. ಸಾಂದರ್ಭಿಕ ರಜೆಯನ್ನು ಮಂಜೂರು ಮಾಡಲು ಅಧಿಕಾರ ಇರುವ ಅಧಿಕಾರಿಗಳು ಮಂಜೂರಾತಿ ನೀಡಬೇಕೆಂದು ಸೂಚಿಸಲಾಗಿದೆ.

ಇನ್ನೂ ಅಧಿಸೂಚನೆ 1ರ ಅನುಬಂಧದಲ್ಲಿ 2026ನೇ ವರ್ಷಕ್ಕೆ ರಾಜ್ಯ ಸರ್ಕಾರಿ ನೌಕರರಿಗೆ ಇರುವ ಪರಿಮಿತ ರಜಾ ದಿನಗಳ ಪಟ್ಟಿಯನ್ನು ಈ ಕೆಳಕಂಡಂತೆ ಪ್ರಕಟಿಸಿದ್ದಾರೆ

## ಇಂಡಿಗೋ ವಿಮಾನಯಾನದಲ್ಲಿ ಗೊಂದಲ: ಬೆಂಗಳೂರಿನಲ್ಲಿ 73 ವಿಮಾನ ರದ್ದು

**ಬೆಂಗಳೂರು:** ದೇಶದ ಅತಿದೊಡ್ಡ ವಿಮಾನಯಾನ ಸಂಸ್ಥೆಗಳಲ್ಲಿ ಒಂದಾದ ಇಂಡಿಗೋ ವಿಮಾನಗಳ ಹಾರಾಟದಲ್ಲಿ ಉಂಟಾಗಿರುವ ಗಂಭೀರ ಅಡಚಣೆಯು ಸತತ ಮೂರನೇ ದಿನಕ್ಕೆ ಕಾಲಿಟ್ಟಿದೆ. ತಾಂತ್ರಿಕ ದೋಷಗಳು, ಸಿಬ್ಬಂದಿ ಕೊರತೆ ಮತ್ತು ಹವಾಮಾನ ಬದಲಾವಣೆಯಿಂದಾಗಿ

ದೇಶಾದ್ಯಂತ ವಿಮಾನಗಳ ಹಾರಾಟ ರದ್ದಾಗಿದ್ದು, ಸಾವಿರಾರು ಪ್ರಯಾಣಿಕರು ವಿಮಾನ ನಿಲ್ದಾಣಗಳಲ್ಲಿ ಸಂಕಷ್ಟಕ್ಕೆ ಸಿಲುಕಿದ್ದಾರೆ. ನಿನ್ನೆ (ಎರಡನೇ ದಿನ) ದೆಹಲಿ, ಮುಂಬೈ, ಬೆಂಗಳೂರು ಸೇರಿದಂತೆ ಪ್ರಮುಖ ವಿಮಾನ ನಿಲ್ದಾಣಗಳಿಂದ ಸುಮಾರು 200 ವಿಮಾನಗಳ ಹಾರಾಟವನ್ನು ರದ್ದುಗೊಳಿಸಲಾಗಿತ್ತು.

ಇಂದಿಗೂ ಮುಂದುವರಿದ ರದ್ದತಿ: ದೇಶಾದ್ಯಂತ 100+ ವಿಮಾನಗಳ ಮೇಲೆ ಪರಿಣಾಮ ಈ ಸಮಸ್ಯೆ ಮೂರನೇ ದಿನವೂ ಮುಂದುವರಿಯುವ ಸಾಧ್ಯತೆಗಳಿದ್ದು, ದೇಶಾದ್ಯಂತ 100ಕ್ಕೂ ಹೆಚ್ಚು ವಿಮಾನಗಳ ಹಾರಾಟ ಇಂದು ಕೂಡ ರದ್ದಾಗುವ ಭೀತಿ ಎದುರಾಗಿದೆ. ಇನ್ನು ಹಲವು ವಿಮಾನಗಳ ಹಾರಾಟದಲ್ಲಿ ಗಣನೀಯ ವಿಳಂಬ ಕಂಡುಬರುತ್ತಿದ್ದು, ಪ್ರಯಾಣಿಕರು ಅಸಮಾಧಾನ ವ್ಯಕ್ತಪಡಿಸಿದ್ದಾರೆ.



ಬೆಂಗಳೂರು ಏರ್‌ಪೋರ್ಟ್‌ನಲ್ಲಿ ಭಾರೀ ವ್ಯತ್ಯಯ ರಾಜಧಾನಿ ಬೆಂಗಳೂರಿನಲ್ಲಿರುವ ಕೆಂಪೇಗೌಡ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣದಲ್ಲಿ ಇಂಡಿಗೋ ವಿಮಾನಗಳ ಹಾರಾಟದಲ್ಲಿ ಭಾರಿ ವ್ಯತ್ಯಯ ಉಂಟಾಗಿದೆ. ನಿನ್ನೆ (ಎರಡನೇ ದಿನ) ಬೆಂಗಳೂರಿನಿಂದ 43 ಇಂಡಿಗೋ ವಿಮಾನಗಳ ಹಾರಾ ಟವನ್ನು ರದ್ದುಗೊಳಿಸಲಾಗಿತ್ತು.

ಆದರೆ, ಇಂದು (ಮೂರನೇ ದಿನ) ಈ ಸಂಖ್ಯೆ ಮತ್ತಷ್ಟು ಹೆಚ್ಚಾಗಿದ್ದು, ಒಟ್ಟು 73 ಇಂಡಿಗೋ ವಿಮಾನಗಳ ಹಾರಾಟವನ್ನು ರದ್ದುಗೊಳಿಸಲಾಗಿದೆ.

ಇಂಡಿಗೋ ಪ್ರಯಾಣಿಕರು ತಮ್ಮ ಪ್ರವಾಸವನ್ನು ರದ್ದುಗೊಳಿಸುವುದು ಇಲ್ಲವೇ ಬೇರೆ ವಿಮಾನಯಾನ ಸಂಸ್ಥೆಗಳನ್ನು ಆಶ್ರಯಿಸುವುದು ಅನಿವಾರ್ಯವಾಗಿದೆ.

ಡಿಜಿಸಿಎಯಿಂದ ಇಂಡಿಗೋ ಅಧಿಕಾರಿಗಳಿಗೆ ಬುಲಾವ್ಸ ವಿಮಾನಗಳ ರದ್ದತಿ ಮತ್ತು ವಿಳಂಬದಿಂದಾಗಿ ಪ್ರಯಾಣಿಕರಿಗೆ ಆಗುತ್ತಿರುವ ತೊಂದರೆಗಳನ್ನು ಗಂಭೀರವಾಗಿ ಪರಿಗಣಿಸಿರುವ ನಾಗರಿಕ ವಿಮಾನಯಾನ ಮಹಾನಿರ್ದೇಶನಾಲಯ (DGCA), ಇಂಡಿಗೋ ಸಂಸ್ಥೆಗೆ ನೋಟಿಸ್ ನೀಡಿದೆ. ವಿಮಾನಗಳ ವಿಳಂಬ ಮತ್ತು ರದ್ದತಿಗಳ ಹಿಂದಿನ ನಿಖರ ಕಾರಣಗಳನ್ನು ವಿವರಿಸುವಂತೆ ಡಿಜಿಸಿಎ ಸೂಚಿಸಿದೆ.

ಅಲ್ಲದೇ, ಪ್ರಯಾಣಿಕರ ಸಂಕಷ್ಟವನ್ನು ಪರಿಹರಿಸಲು ಮತ್ತು ಪರಿಸ್ಥಿತಿ ಸುಧಾರಿಸಲು ಸ್ಪಷ್ಟ ಯೋಜನೆಯನ್ನು ಒದಗಿಸುವಂತೆ ಇಂಡಿಗೋಗೆ ಆದೇಶಿಸಿದೆ. ಈ ವಿಷಯದ ಬಗ್ಗೆ ಚರ್ಚಿಸಲು, ಡಿಜಿಸಿಎ ಇಂದು ಮಧ್ಯಾಹ್ನ ನಡೆಯಲಿರುವ ಉನ್ನತ ಮಟ್ಟದ ಸಭೆಗೆ ಇಂಡಿಗೋ ಅಧಿಕಾರಿಗಳಿಗೆ ತುರ್ತು ಬುಲಾವ್ ನೀಡಿದೆ. 48 ಗಂಟೆಗಳಲ್ಲಿ ಸುಧಾರಣೆಯ ಭರವಸೆ ನೀಡಿದ ಇಂಡಿಗೋ

ಸಂಸ್ಥೆಯಲ್ಲಿ ಉಂಟಾಗಿರುವ ಗೊಂದಲ ಮತ್ತು ಅಡಚಣೆಗಳ ಕುರಿತು ಇಂಡಿಗೋ ಸಂಸ್ಥೆಯು ಔಪಚಾರಿಕ ಪ್ರತಿಕ್ರಿಯೆ ನೀಡಿದೆ. ಸಂಸ್ಥೆಯು ಪ್ರಯಾಣಿಕರಿಗೆ ಉಂಟಾದ ತೊಂದರೆಗೆ ಕ್ಷಮೆಯಾಚಿಸುತ್ತೇವೆ. ಸಮಸ್ಯೆಯನ್ನು ಬಗೆಹರಿಸಿ, ಮುಂದಿನ 48 ಗಂಟೆಗಳೊಳಗೆ ಪರಿಸ್ಥಿತಿಯನ್ನು ಸುಧಾರಿಸುತ್ತೇವೆ ಎಂದು ಭರವಸೆ ನೀಡಿದೆ.

Printed by: R Ramesh, Published by Abhishek D R On Behalf of Abhishek D R, Printed at Maruthi Enterprises. No.1159, Near Floor Mill, D Cross, Doddaballapura Town, Bengaluru rural, Karnataka - 561203,
Published at No. 3769/1, Rajarathna Nivasa, KSRTC Layout, Near Ambedkar Stadium, Rayan Nagara, Nelamangala. Editor Abhishek D R.

## ನ್ಯಾಯಮೂರ್ತಿಗಳಿಂದಲೇ ಭ್ರಷ್ಟಾಚಾರ ಆರೋಪ, ಸಿಬಿಐ ತನಿಖೆಗೆ ವಹಿಸಿ




**ಬೆಂಗಳೂರು**: ರಾಜ್ಯದ ನ್ಯಾಯಮೂರ್ತಿಗಳೇ 63 ಪರ್ಸೆಂಟ್ ಭ್ರಷ್ಟಾಚಾರದ ಬಗ್ಗೆ ಸಾರ್ವಜನಿಕವಾಗಿ ಹೇಳಿದ್ದಾರೆ.

ಆದ್ದರಿಂದ ಭ್ರಷ್ಟಾಚಾರದ ಪ್ರಕರಣವನ್ನು ಸಿಬಿಐ ತನಿಖೆಗೆ ವಹಿಸಬೇಕೆಂದು ಪ್ರತಿಪಕ್ಷ ನಾಯಕ ಆರ್.ಅಶೋಕ ಆಗ್ರಹಿಸಿದರು. ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ವಾಲ್ಮೀಕಿ ಅಭಿವೃದ್ಧಿ ನಿಗಮದ ಹಗರಣ, ಮುಡಾ ಹಗರಣ, 63 ಪರ್ಸೆಂಟ್ ಕಮಿಶನ್, ಮೊದಲಾದ ಆರೋಪಗಳು ಬಂದಾಗ ಮುಖ್ಯಮಂತ್ರಿ ಸಿದ್ದರಾಮಯ್ಯ, ಸಾಕ್ಷಿ ಕೊಡಿ ಎಂದು ಕೇಳಿದ್ದರು. ಯಾವುದೇ ರಾಜ್ಯದ ಚುನಾವಣೆ ನಡೆದರೂ ಕರ್ನಾಟಕ ಎಟಿಎಂ ಆಗಿರುತ್ತದೆ. ಬಿಹಾರ ಚುನಾವಣೆಗೆ ಸುಮಾರು 300 ಕೋಟಿ ರೂ. ವರ್ಗಾವಣೆಯಾಗಿದೆ. ಪೇಸಿಎಂ ಎಂಬ ಭಿತ್ತಿಪತ್ರವನ್ನು ಕಾಂಗ್ರೆಸ್ ನಾಯಕರ ಮುಖದ ಮೇಲೆ ಅಂಟಿಸಬೇಕು. ಇಂತಹ ಸಮಯದಲ್ಲೇ ನ್ಯಾಯಮೂರ್ತಿಗಳು ಹಾಗೂ ಉಪ ಲೋಕಾಯುಕ್ತ ಬಿ.ವೀರಪ್ಪ ಅವರು ಕರ್ನಾಟಕದ ಭ್ರಷ್ಟಾಚಾರದ ಬಗ್ಗೆ ಮುಕ್ತವಾಗಿ ಹೇಳಿದ್ದಾರೆ. ಭ್ರಷ್ಟಾಚಾರಕ್ಕೆ ನ್ಯಾಯಮೂರ್ತಿಗಳೇ ಸಾಕ್ಷಿಯಾಗಿದ್ದಾರೆ. ಆದ್ದರಿಂದ ಸರ್ಕಾರದಲ್ಲಿ ನಡೆಯುತ್ತಿರುವ ಭ್ರಷ್ಟಾಚಾರದ ಪ್ರಕರಣವನ್ನು ಸಿಬಿಐ ತನಿಖೆಗೆ ವಹಿಸಬೇಕು ಎಂದು ಆಗ್ರಹಿಸಿದರು.

ನ್ಯಾಯಮೂರ್ತಿಗಳು ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರ ಮುಖಕ್ಕೆ ಮಂಗಳಾರತಿ ಎತ್ತಿದ್ದಾರೆ. ಭೋವಿ ನಿಗಮದಲ್ಲಿ ಒಂದು ಎಕರೆ ಉಳುಮೆ ನೀಡಲು 25 ಲಕ್ಷ ರೂ. ಕಮಿಶನ್ ಇದೆ. ಬಾರ್ ಲೆಸೆನ್ಸ್‌ಗೆ 20 ಲಕ್ಷ ರೂ. ಕಮಿಶನ್ ಇದೆ. ಟ್ರಾನ್ಸ್‌ಫಾರ್ಮರ್ ಅಳವಡಿಕೆಯಲ್ಲಿ 90 ಕೋಟಿ ರೂ. ಹಗರಣ ನಡೆದಿದೆ. ಕಸದ ಯಂತ್ರ ಖರೀದಿಯಲ್ಲಿ ಎರಡೂವರೆ ಕೋಟಿ ರೂ. ಹಗರಣ ನಡೆಯುತ್ತಿದೆ ಎಂದು ದೂರಿದರು.

ವಿರೋಧ ಪಕ್ಷಗಳಿಗೆ ಹೆದರಿ ಕಾಂಗ್ರೆಸ್ ಸಭೆ ನಡೆಸಿ ಶಾಸಕರನ್ನು ತಯಾರಿ ಮಾಡಿದೆ. ರೈತರಿಗೆ ಮಾಡಿದ ಅನ್ಯಾಯ, ಉತ್ತರ ಕರ್ನಾಟಕಕ್ಕೆ ಮಾಡಿದ ಅನ್ಯಾಯದ ಬಗ್ಗೆ ಸದನದಲ್ಲಿ ಮಾತನಾಡುತ್ತೇವೆ. ಪ್ರವಾಹ ಹಾಗೂ ಉತ್ತರ ಕರ್ನಾಟಕದ ಸಮಸ್ಯೆಗಳ ಬಗ್ಗೆ ಮೊದಲ ದಿನವೇ ಚರ್ಚೆಯಾಗಲೇಬೇಕು. ಮುಖ್ಯಮಂತ್ರಿಗಳೇ ಕಳ್ಳತನ ಮಾಡುತ್ತಿದ್ದಾರೆ, ಹಾಗಾಗಿ ಪೊಲೀಸರು ಕೂಡ ದರೋಡೆಗಳಲ್ಲಿ ಭಾಗಿಯಾಗುತ್ತಿದ್ದಾರೆ. ಪೊಲೀಸರು ಹಣ ಸಂಗ್ರಹ ಮಾಡಬೇಕಿರುವುದರಿಂದ ಅಪರಾಧಿ ಚಟುವಟಿಕೆಗಳಲ್ಲಿ ಅವರೇ ಕಾಣಿಸಿಕೊಳ್ಳುತ್ತಿದ್ದಾರೆ. ರಾಹುಲ್ ಗಾಂಧಿ, ಪ್ರಿಯಾಂಕ ಗಾಂಧಿ ಚೋರಿ ಚೋರಿ ಎಂದು ಕೂಗುತ್ತಾರೆ. ಅವರು ಕರ್ನಾಟಕಕ್ಕೆ ಬಂದರೆ ಇಲ್ಲಿಯೇ ಚೋರಿ ಮಾಡುವುದು ಕಾಣುತ್ತದೆ ಎಂದರು.

ಇಬ್ಬರ ಅಧಿಕಾರದ ಜಗಳದ ನಡುವೆ ಡಾ.ಜಿ.ಪರಮೇಶ್ವರ್ ಕೂಡ ಸಿಎಂ ಸ್ಥಾನಕ್ಕೆ ಪೈಪೋಟಿ ಮಾಡುತ್ತಿದ್ದಾರೆ ಎಂದರು.

## ಗಂಧದ ಎಣ್ಣೆ ಖರೀದಿಯಲ್ಲಿ ಭಾರೀ ಭ್ರಷ್ಟಾಚಾರ: ಬಯಲಿಗೆಳೆದ ಜೆಡಿಎಸ್ ಶಾಸಕ

**ಬೆಂಗಳೂರು**: ಕರ್ನಾಟಕ ಸಾಬೂನು ಮತ್ತು ಮಾರ್ಜಕ ನಿಯಮಿತದಲ್ಲಿ ಗಂಧದ ಎಣ್ಣೆ ಖರೀದಿಯಲ್ಲಿ ಭ್ರಷ್ಟಾಚಾರ ಆಗಿದೆ ಎಂದು ಜೆಡಿಎಸ್ ಶಾಸಕ ಹೆಚ್.ಟಿ ಮಂಜು ಸರ್ಕಾರದ ವಿರುದ್ಧ ಗಂಭೀರ ಆರೋಪ ಮಾಡಿದ್ದಾರೆ. ಕೆಎಸ್‌ಡಿಎಲ್‌ನಲ್ಲಿ ಸಾಬೂನು ತೈಲ ಕಚ್ಚಾ ಸಾಮಾಗ್ರಿಗಳ ಖರೀದಿಯಲ್ಲಿ ಭ್ರಷ್ಟಾಚಾರ ನಡೆದಿದೆ.

ಕಂಪನಿಗೆ ಮಾಹಿತಿ ಕೇಳಿ ಪತ್ರ ಬರೆದಿದ್ದು, ಯಾವುದೇ ಮಾಹಿತಿ ನೀಡಿಲ್ಲ ಎಂದು ಹೇಳಿದ್ದಾರೆ. ಗಂಧದ ಎಣ್ಣೆ ಖರೀದಿಯಲ್ಲಿ ಭ್ರಷ್ಟಾಚಾರ ಆಗಿದೆ ವಿಧಾನಸೌಧದಲ್ಲಿ ಆಯೋಜಿಸಿದ್ದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಜೆಡಿಎಸ್ ಶಾಸಕ ಹೆಚ್.ಟಿ ಮಂಜು, ಗಂಧದ ಎಣ್ಣೆ ಖರೀದಿಯಲ್ಲಿ ಭ್ರಷ್ಟಾಚಾರ ಆಗಿದೆ. 800 ಪುಟಗಳ ವರದಿಯನ್ನ ಪಡೆದಿದ್ದೇವೆ.

9 ಟೆಂಡರ್ ದಾಖಲೆಗಳು ಮಾತ್ರ ಸಿಕ್ಕಿವೆ. ಸರ್ಕಾರದ ಮುಖ್ಯಕಾರ್ಯದರ್ಶಿ, ಇಲಾಖೆಯ ಸಚಿವರು, ಸಿಎಂಗೆ ಪತ್ರ ಬರೆದಿದ್ದು, ಯಾರೊಬ್ಬರೂ ಈವರೆಗೆ ಉತ್ತರ ನೀಡಿಲ್ಲ ಎಂದಿದ್ದಾರೆ. ಕರ್ನಾಟಕ ಸಾಬೂನು ಮತ್ತು ಮಾರ್ಜಕ ನಿಯಮಿತ 1918ರಲ್ಲಿ ಆರಂಭವಾದ ಸಂಸ್ಥೆ. 1500 ಕೋಟಿ ರೂ ಠೇವಣಿಯ ಹಣ ಕೊಟ್ಟಿದ್ದಾರೆ. ನಕಲಿ ದಾಖಲೆ ಮಾಡಿ ಕೊಟ್ಟಿದ್ದಾರೆ. ಮಾರಾಟವಾಗಿಲ್ಲ ಅಂತ 40% ರಿಯಾಯಿತಿಗೆ ಮಾರಾಟ ಮಾಡಿದ್ದಾರೆ ಎಂದು ಹೇಳಿದ್ದಾರೆ.



ಬ್ಲಾಕ್ ಲಿಸ್ಟ್‌ಗೆ ಸೇರಿದ ಕಂಪನಿಗೆ ಟೆಂಡರ್ ಬ್ಲಾಕ್ ಲಿಸ್ಟ್‌ಗೆ ಸೇರಿಸಿರುವ ಕರ್ನಾಟಕ ಅರೋಮಾಸ್ ಎಂಬ ಕಂಪನಿಗೆ ಟೆಂಡರ್ ಕೊಡುತ್ತಾರೆ. ಟೆಂಡರ್‌ನಲ್ಲಿ ಪಾಲಿಸಬೇಕಾದ ನಿಯಮ ಪಾಲಿಸಿಲ್ಲ. ಹೊರಗಡೆಯಿಂದ ಆಮದು ಮಾಡಿಕೊಳ್ಳುತ್ತಿದ್ದೇವೆ ಅಂತಾರೆ ಆದರೆ ದಾಖಲೆ ನೀಡುತ್ತಿಲ್ಲ. ಇಲ್ಲಿನ ಎಣ್ಣೆಯನ್ನೇ ಖರೀದಿ ಮಾಡಿದ್ದಾರೆ. ಯಾವುದೇ GST ಕಟ್ಟಿಲ್ಲ. 2025ರ ಮೇ ತಿಂಗಳಿನಲ್ಲಿ ನಾನು ಪತ್ರ ಬರೆದಿದ್ದೆ. ಆಗ 1ಕೆ.ಜಿ ಗಂಧದ ಎಣ್ಣೆಗೆ 2 ಲಕ್ಷ 24 ಸಾವಿರ ರೂ. ಇತ್ತು. 7500 ಮೆಟ್ರಿಕ್ ಟನ್‌ಗೆ 93,116 ರೂ. ಟೆಂಡರ್ ಕೊಡುತ್ತಾರೆ.

17 ಸಾವಿರ ಕೋಟಿ ರೂ. ವ್ಯತ್ಯಾಸ ಬರುತ್ತಿದೆ.

ಈ ವರ್ಷ ಗಂಧದ ಎಣ್ಣೆಯ ದರ ಕೆ.ಜಿಗೆ 93 ಸಾವಿರ ರೂ ಮಾತ್ರ. ಅಷ್ಟು ವ್ಯತ್ಯಾಸ ಏಕೆ ಬರುತ್ತೆ ಎಂದು ಶಾಸಕ ಹೆಚ್.ಟಿ ಮಂಜು ಪ್ರಶ್ನಿಸಿದ್ದಾರೆ.

ಟೆಂಡರ್ ಪೂರ್ವ ಪರಿಶೀಲನಾ ಸಮಿತಿ ಮಾರುಕಟ್ಟೆ ಮೌಲ್ಯ ಪರಿಶೀಲನೆ ಮಾಡಬೇಕು. ಅವರ ಅನುಮೋದನೆ ಪಡೆದು ಟೆಂಡರ್ ಕರೆಯಬೇಕು. 570 ಕೋಟಿ ರೂ ಟೆಂಡರ್ ಆಗುತ್ತೆ. ದೂರವಾಣಿ ಮುಖಾಂತರ ಸಂಧಾನ ಮಾಡುವ ಪ್ರಯತ್ನ ವ್ಯವಸ್ಥಾಪಕ ನಿರ್ದೇಶಕ ಮಾಡುತ್ತಾರೆ. ದರ ಸಂಧಾನ ಮಾಡಿಲ್ಲ. ಒಂದೇ ವರ್ಷದಲ್ಲಿ ಮೂರು ರೀತಿಯ ಆಡಿಟ್ ವರದಿಯನ್ನ ತರಿಸಿಕೊಳ್ಳುತ್ತಾರೆ. ಅದೇ ವ್ಯಕ್ತಿ ಬೇರೆ ಕಂಪನಿಯ ಹೆಸರಿಗೆ ಟೆಂಡರ್ ಕೊಟ್ಟಿದ್ದಾರೆ ಎಂದು ಆರೋಪಿಸಿದ್ದಾರೆ.

ಒದ್ದು ಒಳಗೆ ಹಾಕುತ್ತೇನೆ ಎಂದ ಸಚಿವ ಎಂಬಿ ಪಾಟೀಲ್‌ಈ ಕುರಿತಾಗಿ ಸಚಿವ ಎಂಬಿ ಪಾಟೀಲ್ ಪ್ರತಿಕ್ರಿಯಿಸಿದ್ದು, ನಾನು ನೋಡಿಲ್ಲ, ತಿಳಿದುಕೊಳ್ಳುತ್ತೇನೆ. ಅದಕ್ಕೆ ಸ್ಪಷ್ಟೀಕರಣ ಕೊಡುತ್ತೇವೆ. ಅವ್ಯವಹಾರ ಆಗಿದ್ದರೆ ನಿರ್ದಾಕ್ಷಿಣ್ಯವಾಗಿ ಕ್ರಮಕೈಗೊಳ್ಳುತ್ತೇವೆ. ತಿಮಿಂಗಲು ಇದ್ದಾವೆ, ಅವೆಲ್ಲಾ ಈ ರೀತಿ ಆರೋಪ ಮಾಡುತ್ತಿದ್ದಾರೆ.

ಯಾರು ಆರೋಪ ಮಾಡಿದ್ದಾರೆ ಅನ್ನೋದನ್ನ ಹೇಳಿದರೆ ಒದ್ದು ಒಳಗೆ ಹಾಕುತ್ತೇನೆ ಎಂದಿದ್ದಾರೆ. ಸಂಪೂರ್ಣ ಮಾಹಿತಿ ಕೊಡುತ್ತೇವೆ. ಬೇಜವಾಬ್ದಾರಿಯಂತೆ ಆರೋಪ ಮಾಡಿದರೆ ಮಾನನಷ್ಟ ಕ್ರಮ ತೆಗೆದುಕೊಳ್ಳುತ್ತೇವೆ. ಯಾವ ರೀತಿ ಕೆಎಸ್‌ಡಿಎಲ್ ಬೆಳೆಯುತ್ತಿದೆ ಎನ್ನುವುದು ನಿಮಗೆ ಗೊತ್ತು. ಟೆಂಡರ್‌ನಲ್ಲಿ ಅವ್ಯವಹಾರ ಆಗಿದ್ದರೆ ಕಠಿಣ ಕ್ರಮ ತೆಗೆದುಕೊಳ್ಳುತ್ತೇವೆ. ಅವರ ಆರೋಪಕ್ಕೆ ನಾನು ಉತ್ತರ ಕೊಡುತ್ತೇವೆ ಎಂದು ಹೇಳಿದ್ದಾರೆ.

## ಭಾರತಕ್ಕೆ ಬಂದ ರಷ್ಯಾ ಅಧ್ಯಕ್ಷ ವ್ಲಾಡಿಮಿರ್ ಪುಟಿನ್; ಪ್ರಧಾನಿ ಮೋದಿಯಿಂದ ಸ್ವಾಗತ

**ದೆಹಲಿ:** ರಷ್ಯಾ ಅಧ್ಯಕ್ಷ ವ್ಲಾಡಿಮಿರ್ ಪುಟಿನ್ ಅವರು ಎರಡು ದಿನಗಳ ಅಧಿಕೃತ ಪ್ರವಾಸಕ್ಕಾಗಿ ಗುರುವಾರ ಸಂಜೆ ಭಾರತಕ್ಕೆ ಆಗಮಿಸಿದ್ದಾರೆ. ಪಾಲಮ್ ತಾಂತ್ರಿಕ ವಿಮಾನ ನಿಲ್ದಾಣದಲ್ಲಿ ವಿಶೇಷ ವಿಮಾನದಿಂದ ಇಳಿದ ತಕ್ಷಣ ಪ್ರಧಾನಿ ನರೇಂದ್ರ ಮೋದಿ ಅವರು ಆತ್ಮೀಯವಾಗಿ ಸ್ವಾಗತಿಸಿದರು.

ಕೊನೆಯ ಬಾರಿಗೆ 2021ರಲ್ಲಿ ಭಾರತಕ್ಕೆ ಆಗಮಿಸಿದ್ದ ಪುಟಿನ್ ಅವರಿಗೆ ಈ ಬಾರಿ ಭರ್ಜರಿ ಸ್ವಾಗತ ಸಿಕ್ಕಿದೆ. ಇಂದು ರಾತ್ರಿ ಪ್ರಧಾನಿ ಮೋದಿ ಅವರು ಪುಟಿನ್ ತಂಡಕ್ಕೆ ವಿಶೇಷ ಔತಣಕೂಟದ ಆಯೋಜನೆ ಮಾಡಿದ್ದಾರೆ. ಶುಕ್ರವಾರ ಬೆಳಗ್ಗೆ ರಾಷ್ಟ್ರಪತಿ ಭವನದಲ್ಲಿ ಭವ್ಯ ಸಮಾರಂಭದೊಂದಿಗೆ ಅಧಿಕೃತ ಸ್ವಾಗತ ನೀಡಲಾಗುವುದು. ನಂತರ ಪುಟಿನ್ ರಾಜ್‌ಘಾಟ್‌ಗೆ ತೆರಳಿ ಮಹಾತ್ಮ ಗಾಂಧೀಜಿಯ ಸಮಾಧಿಗೆ ಪುಷ್ಪಾರ್ಪಣೆ ಮಾಡಲಿದ್ದಾರೆ.

ಹೈದ್ರಾಬಾದ್ ಹೌಸ್ ಮತ್ತು ಭಾರತ ಮಂಟಪದಲ್ಲಿ ಮೋದಿ-ಪುಟಿನ್ ಮಾತುಕತೆ ನಡೆಸಲಿದ್ದಾರೆ. ರಕ್ಷಣೆ, ಶಕ್ತಿ, ವ್ಯಾಪಾರ, ತಂತ್ರಜ್ಞಾನ ಸೇರಿದಂತೆ ಹಲವು ಕ್ಷೇತ್ರಗಳಲ್ಲಿ ಒಪ್ಪಂದಗಳಿಗೆ ಸಹಿ ಬೀಳುವ ನಿರೀಕ್ಷೆ ಇದೆ. ಪುಟಿನ್ ಜೊತೆಗೆ ರಷ್ಯಾದ ವಿದೇಶಾಂಗ ಸಚಿವ ಸೆರ್ಗೆಯಿ ಲ್ಯಾವ್ರೊವ್,



ಉಪಪ್ರಧಾನಿ ದೆನಿಸ್ ಮಂತುರೊವ್ ಸೇರಿದಂತೆ ಹಲವು ಹಿರಿಯ ಅಧಿಕಾರಿಗಳು ಮತ್ತು ವ್ಯಾಪಾರಿ ನಿಯೋಗ ಆಗಮಿಸಿದೆ. ಇದು ಒಪ್ಪಂದಗಳ ಸಂಖ್ಯೆ ಮತ್ತು ಪ್ರಮಾಣ ಎರಡೂ ದಾಖಲೆ ಮುರಿಯುವ ಸಾಧ್ಯತೆ ಇದೆ ಎಂದು ತಜ್ಞರು ಅಭಿಪ್ರಾಯಪಡುತ್ತಿದ್ದಾರೆ.

ಭಾರತ-ರಷ್ಯಾ ಸಂಬಂಧಗಳು ದಶಕಗಳಿಂದಲೂ ಬಲಿಷ್ಠವಾಗಿದ್ದರೂ, ಜಾಗತಿಕ ರಾಜಕೀಯ ಬದಲಾವಣೆಗಳ ನಡುವೆ ಈ ಭೇಟಿಯು ಎರಡೂ ರಾಷ್ಟ್ರಗಳಿಗೆ ಹೊಸ ದಾರಿದೀಪವಾಗಲಿದೆ ಎಂದು ತಜ್ಞರು ಅಭಿಪ್ರಾಯಪಟ್ಟಿದ್ದಾರೆ. ಇಂಧನ, ರಕ್ಷಣಾ, ಅಂತರಿಕ್ಷ ಮತ್ತು ವ್ಯಾಪಾರ ಸೇರಿದಂತೆ ಹಲವು ಕಡೆ ಸಹಕಾರ ವಿಸ್ತರಣೆ ಸಾಧ್ಯತೆ ಇದೆ

ವಿಶೇಷವಾಗಿ ಈ ಬಾರಿ ಚರ್ಚೆಯಾಗುವ ಸಾಧ್ಯತೆ ಇರುವ ವಿಷಯಗಳು

- ಉಳಿದ ಮೂರು ಎಸ್-400 ಕ್ಷಿಪಣಿ ರಕ್ಷಣಾ ವ್ಯವಸ್ಥೆಗಳ ತ್ವರಿತ ಸರಬರಾಜು
- ಸಣ್ಣ ಮತ್ತು ಮಧ್ಯಮ ಪ್ರಮಾಣದ ಪರಮಾಣು ವಿದ್ಯುತ್ ಘಟಕಗಳ ಸ್ಥಾಪನೆ
- ಅತ್ಯಾಧುನಿಕ ಸುಖೋಯ್-57 ಯುದ್ಧ ವಿಮಾನಗಳ ಖರೀದಿ/ಉತ್ಪಾದನೆ
- ರಷ್ಯಾದಿಂದ ಭಾರತಕ್ಕೆ ಗರಿಷ್ಠ ಪ್ರಮಾಣದ ಕಚ್ಚಾ ತೈಲ ಸರಬರಾಜು ಮುಂದುವರಿಕೆ
- ಯುರೇಷಿಯನ್ ಆರ್ಥಿಕ ಒಕ್ಕೂಟದೊಂದಿಗೆ ಮುಕ್ತ ವಾಣಿಜ್ಯ ಒಪ್ಪಂದ (FTA)
- ಉತ್ತರ-ದಕ್ಷಿಣ ಸಾಗಾಣಿಕೆ ಕಾರಿಡಾರ್ (INSTC) ವೇಗವರ್ಧನೆ

## ಮಿಜೋರಾಂನ ಮಾಜಿ ರಾಜ್ಯಪಾಲ ಸ್ವರಾಜ್ ಕೌಶಲ್ ನಿಧನ



**ನವದೆಹಲಿ**: ಮಿಜೋರಾಂನ ಮಾಜಿ ರಾಜ್ಯಪಾಲ ಹಾಗೂ ಹಿರಿಯ ವಕೀಲ ಸ್ವರಾಜ್ ಕೌಶಲ್ ಗುರುವಾರ ನಿಧನರಾದರು. ದಿವಂಗತ ಬಿಜೆಪಿ ಹಿರಿಯ ನಾಯಕಿ, ಮಾಜಿ ಕೇಂದ್ರ ಸಚಿವೆ ಸುಷ್ಮಾ ಸ್ವರಾಜ್ ಅವರ ಪತಿ ಮತ್ತು ನವದೆಹಲಿ ಸಂಸದೆ ಬನ್ಸುರಿ ಸ್ವರಾಜ್ ಅವರ ತಂದೆ.

ತಂದೆಯ ನಿಧನದ ನಂತರ ಬನ್ಸುರಿ ಸ್ವರಾಜ್ ಅವರು ಎಕ್ಸ್‌ನಲ್ಲಿ ತಮ್ಮ ನೋವನ್ನು ಹಂಚಿಕೊಂಡಿದ್ದಾರೆ. "ನಿಮ್ಮ ನಿರ್ಗಮನವು ನಮ್ಮ ಹೃದಯದ ಮೇಲೆ ಆಳವಾದ ನೋವುಂಟುಮಾಡಿದೆ. ಆದರೆ ಮನಸ್ಸು ನಂಬುವಂತೆ, ನೀವು ಈಗ ಸರ್ವಶಕ್ತರ ಸನ್ನಿಧಿಯಲ್ಲಿ ತಾಯಿಯೊಂದಿಗೆ ಮತ್ತೆ ಒಂದಾಗಿರುವಿರಿ. ನಿಮ್ಮ ಮಗಳಾಗಿರುವುದು ನನ್ನ ಜೀವನದ ಅತ್ಯಂತ ದೊಡ್ಡ ಹೆಮ್ಮೆ. ನಿಮ್ಮ ಮೌಲ್ಯಗಳು, ನಿಮ್ಮ ಆಶೀರ್ವಾದಗಳು ಮತ್ತು ನಿಮ್ಮ ಪರಂಪರೆ ನನ್ನ ಮುಂದಿನ ಜೀವನದ ದಾರಿದೀಪವಾಗಿರುತ್ತವೆ." ಬನ್ಸುರಿಯ ಈ ಮಾತುಗಳು ಸಾಮಾಜಿಕ ಜಾಲತಾಣಗಳಲ್ಲಿ ಹಂಚಿಕೊಳ್ಳಲಾಗಿದ್ದು, ಸಾವಿರಾರು ಜನರು ಸಂತಾಪ ಸೂಚಿಸಿದ್ದಾರೆ.


ಸ್ವರಾಜ್ ಕೌಶಲ್ ಅವರು ತಮ್ಮ ವೃತ್ತಿಜೀವನದ ಆರಂಭದಲ್ಲೇ ಭಾರತದ ಅತ್ಯಂತ ಕಿರಿಯ ರಾಜ್ಯಪಾಲ ಎಂಬ ಗೌರವವನ್ನು ಪಡೆದಿದ್ದರು. ಮಿಜೋರಾಂನಲ್ಲಿ ಅವರು ಮಾಡಿದ ಸೇವೆ, ಆಡಳಿತದ ದೃಢತೆ ಇಂದಿಗೂ ಜನರು ನೆನಪಿಸಿಕೊಳ್ಳುವಷ್ಟು ಮಹತ್ವದ್ದಾಗಿತ್ತು. ಮಿಜೋರಾಂನ ಪಾಲಿಟಿಕಲ್ ಪರಿಸ್ಥಿತಿಯನ್ನು ಸುಧಾರಿಸುವಲ್ಲಿ ಮತ್ತು ರಾಜ್ಯದ ಶಾಂತಿ ಪ್ರಕ್ರಿಯೆಗೆ ಕೊಡುಗೆ ನೀಡುವಲ್ಲಿ ಅವರ ಪಾತ್ರ ಮೆಚ್ಚುಗೆಯನ್ನು ಪಡೆದುಕೊಂಡಿತ್ತು. ವಕೀಲರಾಗಿ ತನ್ನ ವೈಯಕ್ತಿಕ ವೃತ್ತಿಜೀವನದಲ್ಲಿಯೂ ಸ್ವರಾಜ್ ಕೌಶಲ್ ಅವರು ಹೆಸರು ಗಳಿಸಿದ್ದರು.

ಸ್ವರಾಜ್ ಕೌಶಲ್ ನಿಧನಕ್ಕೆ ಪ್ರಧಾನಿ ನರೇಂದ್ರ ಮೋದಿ ಸಂತಾಪ ಸೂಚಿಸಿ, ಅವರು ರಾಷ್ಟ್ರಕ್ಕೆ ನೀಡಿದ ಸೇವೆಯನ್ನು ಸ್ಮರಿಸಿದರು. ಪ್ರಧಾನಿ ಮೋದಿ ತಮ್ಮ ಅಧಿಕೃತ ಎಕ್ಸ್ ಖಾತೆಯಲ್ಲಿ ಬರೆದುಕೊಂಡಿದ್ದು, "ಸ್ವರಾಜ್ ಕೌಶಲ್ ಅವರು ಗಣ್ಯ ಕಾನೂನು ತಜ್ಞರಾಗಿದ್ದರು. ದೀನದಲಿತರ ಸೇವೆಗಾಗಿ ತಮ್ಮ ಜೀವನವನ್ನು ಸಮರ್ಪಿಸಿಕೊಂಡ ಸಾರ್ವಜನಿಕ ವ್ಯಕ್ತಿ. ಮಿಜೋರಾಂ ರಾಜ್ಯಪಾಲರಾಗಿದ್ದ ಅವಧಿಯಲ್ಲಿ ಅವರು ಆ ರಾಜ್ಯದ ಜನರ ಮೇಲೆ ಶಾಶ್ವತವಾದ ಪ್ರಭಾವ ಬೀರಿದ್ದರು. ಅವರ ಅಗಲಿಕೆಯು ದೊಡ್ಡ ನಷ್ಟ" ಎಂದು ಮೋದಿ ಬರೆದಿದ್ದಾರೆ.

ದೆಹಲಿ ಮುಖ್ಯಮಂತ್ರಿ ರೇಖಾ ಗುಪ್ತಾ, ಬಿಜೆಪಿ ರಾಷ್ಟ್ರೀಯ ಅಧ್ಯಕ್ಷ ಜೆ.ಪಿ. ನಡ್ಡ, ಮಾಜಿ ಕೇಂದ್ರ ಸಚಿವ ರವಿಶಂಕರ ಪ್ರಸಾದ್, ಅರುಣ ಜೇಟ್ಲಿ ಅವರ ಪತ್ನಿ ಸಂಗೀತಾ ಜೇಟ್ಲಿ ಸೇರಿದಂತೆ ಅನೇಕ ಗಣ್ಯರು ಸಂತಾಪ ಸೂಚಿಸಿದ್ದಾರೆ.

## ಡಾಕ್ಟರ್ ಕೃತಿಕಾ ರೆಡ್ಡಿ ಹತ್ಯೆ ಕೇಸ್ – ಎಸ್‌ಪಿಪಿಯಾಗಿ ಹಿರಿಯ ವಕೀಲ ಪ್ರಸನ್ನಕುಮಾರ್ ನೇಮಕ

**ಬೆಂಗಳೂರು**: ರಾಜ್ಯಾದ್ಯಂತ ಸಂಚಲನ ಸೃಷ್ಟಿಸಿದ್ದ ಡಾಕ್ಟರ್ ಕೃತಿಕಾ ರೆಡ್ಡಿ ಕೊಲೆ ಪ್ರಕರಣಕ್ಕೆ ಹೊಸದೊಂದು ತಿರುವು ಸಿಕ್ಕಿದೆ. ಹತ್ಯೆ ಪ್ರಕರಣದ ವಿಚಾರಣೆಗೆ ಸರ್ಕಾರ ಎಸ್‌ಪಿಪಿಯನ್ನಾಗಿ ಹಿರಿಯ ವಕೀಲರಾದ ಪ್ರಸನ್ನಕುಮಾರ್ ಅವರನ್ನು ನೇಮಕ ಮಾಡಿ ಆದೇಶ ಮಾಡಿದೆ.



ಕೃತಿಕಾ ರೆಡ್ಡಿಯನ್ನು ಆಕೆಯ ಪತಿ ಡಾಕ್ಟರ್ ಮಹೇಂದ್ರ ರೆಡ್ಡಿ ಅನಸ್ತೇಶಿಯಾ ಕೊಟ್ಟು ಹತ್ಯೆ ಮಾಡಿದ್ದ. ಸಾವು ಸಂಭವಿಸಿದ 6 ತಿಂಗಳ ಬಳಿಕ ಎಫ್‌ಎಸ್‌ಎಲ್ ರಿಪೋರ್ಟ್ ಪಡೆದಿದ್ದ ಪೊಲೀಸರು ಮಹೇಂದ್ರನನ್ನು ಬಂಧಿಸಿದ್ದರು. ಇದೀಗ ಪ್ರಕರಣವನ್ನು ತಾರ್ಕಿಕ ಅಂತ್ಯಕ್ಕೆ ತೆಗೆದುಕೊಂಡು ಹೋಗಲು ಎಸ್‌ಪಿಪಿಯಾಗಿ ಪ್ರಸನ್ನಕುಮಾರ್ ಅವರನ್ನು ನೇಮಕ ಮಾಡಲಾಗಿದೆ. 2024ರ ಮೇ 26ರಂದು ಮಹೇಂದ್ರ ಮತ್ತು ಕೃತಿಕಾ ರೆಡ್ಡಿಗೆ ಮದುವೆಯಾಗಿತ್ತು.

ವೈದ್ಯೆಗೆ ಅಜೀರ್ಣ, ಗ್ಯಾಸ್ಟ್ರಿಕ್ ಮತ್ತು ಲೋ ಶುಗರ್ ಸಮಸ್ಯೆ ಇತ್ತು. ಈ ವಿಚಾರ ಮಹೇಂದ್ರನಿಗೆ ತಿಳಿಸದೆ ಮದುವೆ ಮಾಡಿದ್ದರು. ಮದುವೆಯಾದ ಬಳಿಕ ಈ ವಿಚಾರ ಮಹೇಂದ್ರನಿಗೆ ಗೊತ್ತಾಗಿತ್ತು. ನಿತ್ಯ ವಾಂತಿ ಹಾಗೂ ಇತರ ಸಮಸ್ಯೆಯಿಂದ ಕೃತಿಕಾ ಬಳಲುತ್ತಿದ್ದರು. ಇದೇ ಕಾರಣಕ್ಕೆ ಆರೋಪಿ ಕೊಲೆಗೆ ಸಂಚು ರೂಪಿಸಿದ್ದ ಎನ್ನಲಾಗಿತ್ತು. ಕೊಲೆಯಾದ ಕೃತಿಕಾ ಆಗರ್ಭ ಶ್ರೀಮಂತೆ

ಹೌದು. ಗಂಡನಿಂದಲೇ ಕೊಲೆಯಾದ ವೈದ್ಯೆ ಕೃತಿಕಾ ರೆಡ್ಡಿ ಆಗರ್ಭ ಶ್ರೀಮಂತೆ. ಕುಟುಂಬದಲ್ಲಿ ಹಣಕಾಸಿಗೆ ಯಾವುದೇ ತೊಂದರೆ ಇರಲಿಲ್ಲ. ತಂದೆ ಮುನಿರೆಡ್ಡಿ ನೂರಾರು ಕೋಟಿ ಆಸ್ತಿ ಒಡೆಯನಾಗಿದ್ದಾರೆ. ಮುನ್ನೇಕೊಳಲುವಿನಲ್ಲಿ ಮುನಿರೆಡ್ಡಿ ಜಮೀನ್ದಾರರಾಗಿದ್ದು, ತಿಂಗಳಿಗೆ ಹತ್ತಾರು ಲಕ್ಷ ಬಾಡಿಗೆಯೇ ಬರುತ್ತೆ. ಹೀಗಾಗಿ ಮಗಳನ್ನ ಅದ್ಧೂರಿಯಾಗಿಯೇ ಮದ್ವೆ ಮಾಡಿಕೊಟ್ಟಿದ್ದರು. ಇತ್ತ ಕೊಲೆಗಡುಕ ಡಾಕ್ಟರ್ ಮಹೇಂದ್ರ ರೆಡ್ಡಿ ಕುಟುಂಬ ಕೂಡ ಕಡಿಮೆ ಏನಿರಲಿಲ್ಲ. ಆದ್ರೂ ಮಹೇಂದ್ರ ಕ್ಲಿನಿಕ್ ಆರಂಭಿಸಲು ಮುನಿರೆಡ್ಡಿಯೇ ಹಣಕಾಸಿನ ನೆರವು ನೀಡಿದ್ರು ಎಂದು ತಿಳಿದುಬಂದಿದೆ.

## ಮತ್ತೆ ಮುನ್ನಲೆಗೆ ಬಂದ ಬಲ್ಡೋಟಾ ಕಾರ್ಖಾನೆ ವಿವಾದ: ಹೋರಾಟಕ್ಕಿಳಿದ ರೈತರು

ಕಳೆದ ವರ್ಷ ಬಲ್ಡೋಟಾ ಕಾರ್ಖಾನೆಯನ್ನ ವಿರೋಧಿಸಿ ಗವಿ ಮಠದ ಅಭಿನವ ಗವಿ ಸಿದ್ದೇಶ್ವರ ಶ್ರೀಗಳು ಹೋರಾಟಕ್ಕೆ ಇಳಿದಿದ್ದರು. ಅಷ್ಟೇ ಅಲ್ಲದೆ ಕಣ್ಣೀರು ಕೂಡ ಹಾಕಿದ್ದರು. ಆ ಸಮಯದಲ್ಲಿ ಸಿಎಂ ಸೂಚನೆ ಮೇರೆಗೆ ಕಾರ್ಖಾನೆಯ ಕೆಲಸ ಕೆಲಕಾಲ ಸ್ಥಗಿತವಾಗಿತ್ತು. ದಿನ ಕಳೆದಂತೆ ಎಂದಿನಂತೆ ಕಾರ್ಖಾನೆಯ ಕೆಲಸ ಆರಂಭವಾಗಿತ್ತು. ಕುಡಿಯುವ ನೀರಿನ ವಿಚಾರವಾಗಿ ಕಾರ್ಖಾನೆ ಹಾಗೂ ಕುರಿಗಾಹಿಗಳ ನಡುವೆ ದೊಡ್ಡ ಗಲಾಟೆಯಾಗಿತ್ತು. ಕಾರ್ಖಾನೆ ವಿಸ್ತರಣೆ ವಿರೋಧಿಸಿ ಕಳೆದ 36 ದಿನಗಳಿಂದ ಜಿಲ್ಲಾ ಬಚಾವೋ ಆಂದೋಲನ ಸಮಿತಿ ಹೋರಾಟ ಮಾಡುತ್ತಿದೆ. ಇದೆಲ್ಲದರ ನಡುವೆ ಇಂದು ಕಾರ್ಖಾನೆ ಬೇಕೆಂದು ಹೋರಾಟ ಆರಂಭವಾಗಿದೆ.

ಕಾರ್ಖಾನೆ ಪರವಾಗಿ ರೈತರು ಇಂದಿನಿಂದ ಅನಿರ್ದಿಷ್ಟಾವಧಿ ಧರಣಿ ಆರಂಭಿಸಿದ್ದಾರೆ. ಬಲ್ಡೋಟಾ ಸ್ಟೀಲ್ ಆ್ಯಂಡ್ ಪವರ್ ಲಿಮಿಟೆಡ್, ಕೊಪ್ಪಳ ತಾಲೂಕಿನ ಬಸಾಪೂರ ಬಳಿ ವಿಸ್ತರಣೆಯಾಗಿರುವ ಕಾರ್ಖಾನೆ. ಸುಮಾರು 54 ಸಾವಿರ ಕೋಟಿ ರೂ. ವೆಚ್ಚದಲ್ಲಿ ವಿಸ್ತರಣೆಯಾಗಿದೆ. ಈ ಕಾರ್ಖಾನೆ ಆರಂಭದ ದಿನದಿಂದ ವಿವಾದ ಶುರುವಾಗಿದೆ. ಕೊಪ್ಪಳ



ಜಿಲ್ಲೆಯ ಜನ ಕಾರ್ಖಾನೆ ವಿರೋಧಿಸಿ ಬೃಹತ್ ಪ್ರತಿಭಟನೆ ಮಾಡಿದ್ರು. ಕೊಪ್ಪಳ ಬಂದ್ ಮಾಡಿ ಹೋರಾಟ ಮಾಡಿದ್ರು. ಹೋರಾಟದಲ್ಲಿ ಕೊಪ್ಪಳದ ಅಭಿನವ ಗವಿ ಸಿದ್ದೇಶ್ವರ ಶ್ರೀಗಳು ಕೂಡಾ ಭಾಗಿಯಾಗಿದ್ರು. ಇದೀಗ ಈ ಕಾರ್ಖಾನೆ ವಿಚಾರ ಮತ್ತೆ ಮುನ್ನಲೆಗೆ ಬಂದಿದೆ.

ಕಾರ್ಖಾನೆ ಪರವಾಗಿ ರೈತರಿಂದ ಧರಣಿ


ಬಲ್ಡೋಟಾ ಕಾರ್ಖಾನೆಗೆ ಭೂಮಿ ಕಳೆದುಕೊಂಡವರು ಕಾರ್ಖಾನೆ ಬೇಕು ಅಂತಾ ಹೋರಾಟಕ್ಕೆ ಇಳಿದಿದ್ದಾರೆ. ಇಂದಿನಿಂದ ಕೊಪ್ಪಳ ಡಿಸಿ ಆಫೀಸ್ ಮುಂದೆ ಬಲ್ಡೋಟಾ ಕಾರ್ಖಾನೆಗಾಗಿ ಭೂಮಿ ಕಳೆದುಕೊಂಡವರಿಂದ ಅನಿರ್ದಿಷ್ಟಾವಧಿ ಧರಣಿಗೆ ಚಾಲನೆ ನೀಡಲಾಗಿದೆ. 18 ವರ್ಷಗಳಿಂದ ಸುಮಾರು 300ಕ್ಕೂ ಅಧಿಕ ರೈತರು ಕೆಐಡಿಬಿಗೆ ಜಮೀನು ನೀಡಿದ್ದಾರೆ. ಇದೀಗ ಆ ರೈತರು ನಮಗೆ ಕಾರ್ಖಾನೆ ಸ್ಥಾಪಿಸಿ ಕೆಲಸ ಕೊಡಿ, ಇಲ್ಲವೇ ಸರ್ಕಾರಿ ನೌಕರಿ ಕೊಡಿ ಎಂದು ಹೋರಾಟಕ್ಕೆ ಧುಮುಕಿದ್ದಾರೆ.

ಭೂಮಿ ಕಳೆದುಕೊಂಡ ಕೊಪ್ಪಳ ತಾಲೂಕಿನ ಹಾಲು ವರ್ತಿ, ಬಸಾಪೂರ ಭಾಗದ ರೈತರು ಕಾರ್ಖಾನೆ ಬೇಕೇ ಬೇಕು ಎನ್ನುತ್ತಿದ್ದಾರೆ. ಇನ್ನು ಈಗಾಗಲೇ ಬಲ್ಡೋಟಾ ಕಾರ್ಖಾನೆ ವಿಚಾರವಾಗಿ ಕೊಪ್ಪಳದಲ್ಲಿ ಪರ ವಿರೋಧ ಹೋರಾಟಗಳು ನಡೆಯುತ್ತಿವೆ. ಬಲ್ಡೋಟಾ, ಕಿರ್ಲೋಸ್ಕರ್, ಮುಕುಂದ ಸುಮಿ ಸೇರಿ ಯಾವ ಕಾರ್ಖಾನೆ ವಿಸ್ತರಣೆಯಾಗಬಾರದೆಂದು ಕೊಪ್ಪಳದಲ್ಲಿ ಕಳೆದ 36 ದಿನಗಳಿಂದ ಹೋರಾಟ ನಡೆಯುತ್ತಿದೆ. ಜಿಲ್ಲಾ ಬಚಾವೋ ಆಂದೋಲನ ಸಮಿತಿಯಿಂದ ಕೊಪ್ಪಳ ನಗರಸಭೆ ಮುಂಭಾಗ ಹೋರಾಟ ನಡೆಯುತ್ತಿದೆ. ಈ ಹೋರಾಟದಲ್ಲಿ ನಾಡಿನ ಸ್ವಾಮೀಜಿಗಳು, ಸಿನಿಮಾ ನಟರು ಭಾಗಿಯಾಗಿದ್ದರು. ಇಂದು ಇದೇ ಹೋರಾಟಕ್ಕೆ ರಾಜ್ಯ ರೈತ ಸಂಘ ಬೆಂಬಲ ನೀಡಿದೆ.

ಇಂದು ಬಲ್ಡೋಟಾ ಕಾರ್ಖಾನೆ ವಿರೋಧಿಸಿ ರಾಜ್ಯ ರೈತ ಸಂಘ ಕೊಪ್ಪಳದಲ್ಲಿ ಪ್ರತಿಭಟನೆ ಹಮ್ಮಿಕೊಂಡಿತ್ತು. ಕೊಪ್ಪಳ ಬಸ್ ನಿಲ್ದಾಣದ ಮುಂದೆ ಪ್ರತಿಭಟನೆ ಮಾಡಿ ಬಲ್ಡೋಟಾ ವಿಸ್ತರಣೆಯನ್ನ ವಿರೋಧಿಸಿದರು. ಪ್ರತಿಭಟನೆಯಲ್ಲಿ ಮಹಿಳಾ ರೈತ ಮುಖಂಡರು ಭಾಗಿಯಾಗಿದ್ದರು. ಬಲ್ಡೋಟಾ ಕಂಪನಿ ತೊಲಗಬೇಕೆಂದು ಘೋಷಣೆ ಕೂಗಿ ಆಕ್ರೋಶ ವ್ಯಕ್ತಪಡಿಸಿದರು. ಬಸ್ ನಿಲ್ದಾಣದ ಮುಂಭಾಗದಿಂದ ಅಶೋಕ ವೃತ್ತದವರೆಗೂ ರ್ಯಾಲಿ ಮಾಡಿ ಸರ್ಕಾರದ ವಿರುದ್ಧ ರೈತ ಸಂಘದ ಮುಖಂಡರು ಆಕ್ರೋಶ ಹೊರಹಾಕಿದರು.

ಇದೆಲ್ಲದರ ನಡುವೆ ಇದೀಗ ಕೊಪ್ಪಳದಲ್ಲಿ ಕಾರ್ಖಾನೆ ಬೇಕೇಬೇಕು ಎಂದು ಮತ್ತೊಂದು ಹೊಸ ವರಸೆ ಆರಂಭವಾಗಿದೆ. ಒಟ್ಟಾರೆ ಕೊಪ್ಪಳದಲ್ಲಿ ಬಲ್ಡೋಟಾ ಪರ ಹೋರಾಟ ಆರಂಭವಾಗಿದೆ. ಜನರ ಆರೋಗ್ಯದ ದೃಷ್ಟಿಯಿಂದ ಜಿಲ್ಲಾ ಬಚಾವೋ ಆಂದೋಲನ ಸಮಿತಿ ಹೋರಾಟ ನಡೆಸುತ್ತಿದ್ದರೆ, ಇತ್ತ ಕಾರ್ಖಾನೆ ಪರವಾಗಿ ರೈತರು ಹೋರಾಟಕ್ಕೆ ಇಳಿದಿದ್ದಾರೆ. ಇದು ಸದ್ಯ ಜಿಲ್ಲಾಡಳಿತಕ್ಕೆ ತಲೆನೋವಾಗಿ ಪರಿಣಮಿಸಿದೆ. ಮುಂದಿನ ದಿನಗಳಲ್ಲಿ ಪರ-ವಿರುದ್ಧ ಹೋರಾಟ ಯಾವ ರೀತಿ ತಿರುವು ಪಡೆದುಕೊಳ್ಳುತ್ತೆ ಕಾದು ನೋಡಬೇಕಾಗಿದೆ.

## ಮೃಗಾಲಯದ ಬೇಲಿ ದಾಟಿ, ಸಿಂಹದ ಬಾಯಿಗೆ ಆಹಾರವಾದ ಯುವಕ



**ಬ್ರೆಜಿಲ್**: ಸಿಂಹ ರಾಜನನ್ನು ಹತ್ತಿರದಿಂದ ನೋಡಬೇಕು! ಈ ಅವಿವೇಕದ ಆಸೆ ಒಬ್ಬ ಯುವಕನ ಜೀವಕ್ಕೇ ಕುತ್ತಾಗಿದೆ. ಕಾಡು ಪ್ರಾಣಿಗಳ ಸಾಮೀಪ್ಯವು ಎಷ್ಟು ಪ್ರಾಣಘಾತಕವಾಗಬಹುದು ಎಂಬುದರ ಭಯಾನಕ ನಿದರ್ಶನವಾಗಿ ಬ್ರೆಜಿಲ್‌ನಲ್ಲಿ ನಡೆದ ಒಂದು ಘಟನೆಯ ವೀಡಿಯೊ ಸಾಮಾಜಿಕ ಮಾಧ್ಯಮದಲ್ಲಿ ವೈರಲ್ ಆಗುತ್ತಿದೆ. ಸಿಂಹಗಳ ಬಳಿ 'ಸೆಲ್ಫಿ' ತೆಗೆದುಕೊಳ್ಳಲು ಪ್ರಯತ್ನಿಸಿ ಜನರು ಪ್ರಾಣ ಕಳೆದುಕೊಳ್ಳುವ ದುರಂತಗಳು ಹಿಂದೆ ಸಾಕಷ್ಟು ನಡೆದಿದ್ದರೂ, ಈ ಬಾರಿ ಮೃಗಾಲಯದೊಳಗೆ ಬೇಲಿ ದಾಟಿ ಸಿಂಹಕ್ಕೆ ಆಹಾರವಾದ ಭಾಯಾನಕ ಘಟನೆ ಎಲ್ಲರನ್ನು ಸ್ತಬ್ಧಗೊಳಿಸಿದೆ.

ಈ ಘಟನೆ ಬ್ರೆಜಿಲ್‌ನ ಅರುಡಾ ಕ್ಯಾಮರಾ ಮೃಗಾಲಯದಲ್ಲಿ ನಡೆದಿರುವುದಾಗಿ ತಿಳಿದುಬಂದಿದೆ. ವೈರಲ್ ಆಗಿರುವ ವೀಡಿಯೊದಲ್ಲಿ, ಒಬ್ಬ ಯುವಕ ಸ್ಪಷ್ಟವಾಗಿ ಮೃಗಾಲಯದ ನಿಗದಿತ ಪಥ ಮತ್ತು ಸುರಕ್ಷತಾ ಬೇಲಿಗಳನ್ನು ಉಲ್ಲಂಘಿಸಿ, ಸಿಂಹವು ಇರುವ ಬಳಿ ನೇರವಾಗಿ ಹೋಗಲು ಪ್ರಯತ್ನಿಸುವುದನ್ನು ಕಾಣಬಹುದು. ಸುರಕ್ಷತಾ ಗೋಡೆಯ ಮೇಲೆ ಏರಿ ಮರದ ಮೂಲಕ ಸಿಂಹದ ಬಳಿ ಇರುವ ಜಾಗಕ್ಕೆ ಇಳಿದಿದ್ದಾನೆ. ವೀಡಿಯೊ ದೃಶ್ಯಗಳು ತೋರಿಸುವಂತೆ, ಯುವಕನನ್ನು ಕಂಡ ಸಿಂಹ ತಕ್ಷಣವೇ ಗರ್ಜಿಸಿ ದಾಳಿ ಮಾಡಿತು. ಯುವಕ ಯಾವುದೇ ಪ್ರತಿರೋಧ ಮಾಡಲು ಅಗದೇ ಅಸಹಾಯಕನಾಗಿದ್ದಾನೆ.

ಸಿಂಹವು ಯುವಕನನ್ನು ಎಳೆದುಕೊಂಡು, ಪೊದೆಗಳ ಆಚೆಗೆ ಎಳೆದುಕೊಂಡು ಹೋಯಿತು. ಅಲ್ಲಿ ಯುವಕನ ಮೇಲೆ ಸಿಂಹವು ಹಲ್ಲೆ ಮಾಡಿದೆ ಎನ್ನುವುದು ದೃಶ್ಯಗಳಿಂದ ಅರ್ಥವಾಗುತ್ತದೆ. ಈ ಭೀಕರ ದೃಶ್ಯವನ್ನು ಸ್ಥಳದಲ್ಲಿದ್ದ ಇತರ ಪ್ರವಾಸಿಗರು ತಮ್ಮ ಮೊಬೈಲ್ ಫೋನ್ ಕ್ಯಾಮರಾಗಳಲ್ಲಿ ರೆಕಾರ್ಡ್ ಮಾಡಿದ್ದಾರೆ. ಆ ದೃಶ್ಯಗಳು ಈಗ ಸಾಮಾಜಿಕ ಮಾಧ್ಯಮದಲ್ಲಿ ರಾಕೆಟ್ ವೇಗದಲ್ಲಿ ಹರಡಿವೆ. ಈ ಘಟನೆಯ ನಂತರ ಮೃಗಾಲಯದ ಅಧಿಕಾರಿಗಳು ತುರ್ತು ಕಾರ್ಯಾಚರಣೆ ನಡೆಸಿದರೂ, ಯುವಕನನ್ನು ಉಳಿಸಲು ಸಾಧ್ಯವಾಗಲಿಲ್ಲ. ಮೃಗಾಲಯದ ಪ್ರತಿನಿಧಿಯೊಬ್ಬರು ಮಾಧ್ಯಮಗಳಿಗೆ ನೀಡಿದ ಪ್ರತಿಕ್ರಿಯೆಯಲ್ಲಿ, ಈ ಘಟನೆ ತೀರಾ ಬೇಸರದ ಸಂಗತಿಯಾಗಿದೆ. ಸುರಕ್ಷತಾ ನಿಯಮಗಳನ್ನು ಗಂಭೀರವಾಗಿ ಉಲ್ಲಂಘಿಸಿದ್ದು ಈ ದುರಂತಕ್ಕೆ ಕಾರಣವಾಗಿದೆ. ನಾವು ಎಲ್ಲಾ ಸುರಕ್ಷತಾ ಮುನ್ನೆಚ್ಚರಿಕೆಗಳನ್ನು ತೆಗೆದುಕೊಂಡಿದ್ದೇವೆ, ಆದರೆ ಆ ವ್ಯಕ್ತಿ ತಾನಾಗಿಯೇ ಈ ಸ್ಥಿತಿ ತಂದುಕೊಂಡಿದ್ದಾನೆ ಎಂದು ಹೇಳಿದ್ದಾರೆ.

ಕಾಡು ಪ್ರಾಣಿಗಳು ಎಂದಿಗೂ ಸಾಕುಪ್ರಾಣಿಗಳಲ್ಲ, ಅವು ಶಕ್ತಿಯುತವಾಗಿವೆ ಹೆಚ್ಚು ದಾಳಿ ಮಾಡಬಹುದು. ಎಲ್ಲಾ ಪ್ರವಾಸಿಗರೂ ನಿಗದಿತ ಮಾರ್ಗದಲ್ಲಿ ಮಾತ್ರ ಚಲಿಸಬೇಕು ಮತ್ತು ಯಾವುದೇ ಸಂದರ್ಭದಲ್ಲಿ ಬೇಲಿ ದಾಟಬಾರದು ಎಂದು ಸ್ಪಷ್ಟಪಡಿಸಿದ್ದಾರೆ.

ಸಾಮಾಜಿಕ ಮಾಧ್ಯಮದಲ್ಲಿ ಈ ಘಟನೆಯ ವೀಡಿಯೊವನ್ನು ಕಂಡ ನೆಟ್ಟಿಗರು ತೀವ್ರವಾಗಿ ಪ್ರತಿಕ್ರಿಯಿಸಿದ್ದಾರೆ. ಬಹುತೇಕ ಬಳಕೆದಾರರು ಯುವಕನ ಅವಿವೇಕಿ ನಡವಳಿಕೆಗೆ ಆಶ್ಚರ್ಯ ವ್ಯಕ್ತಪಡಿಸಿದರೆ, ಅಂತಹ ಭೀಕರ ದೃಶ್ಯಗಳನ್ನು ಶೇರ್ ಮಾಡುವುದು ನೈತಿಕವಾಗಿ ಸರಿಯೇ ಎಂಬ ಬಗ್ಗೆ ಚರ್ಚೆಯೂ ನಡೆದಿದೆ.

## ಸೈಬರ್ ಕ್ರೈಂ ತಡೆಗೆ ಕರ್ನಾಟಕದ ದಿಟ್ಟ ಹೆಜ್ಜೆ 2025ರಲ್ಲಿ ಕೇಸ್‌ಗಳ ಸಂಖ್ಯೆ 13,000ಕ್ಕೆ ಇಳಿಕೆ

**ಬೆಂಗಳೂರು**: ದೇಶದಲ್ಲಿ ಸೈಬರ್ ಕ್ರೈಂ ಪ್ರಕರಣಗಳು ಮೇಲಿಂದ ಮೇಲೆ ವರದಿಯಾಗುತ್ತಿವೆ. ಬಹುತೇಕ ವಿದ್ಯಾವಂತರೇ ಇಂತಹ ಕೇಸ್‌ಗಳಲ್ಲಿ ಸಂತ್ರಸ್ತರಾಗುತ್ತಿದ್ದು, ಡಿಜಿಟಲ್ ಅರೆಸ್ಟ್ ಮತ್ತು ಟ್ರೇಡಿಂಗ್ ಹೆಸರಿನಲ್ಲಿ ವಂಚನೆಗೆ ಒಳಗಾಗುತ್ತಿದ್ದಾರೆ.

ಈ ನಡುವೆ ಕರ್ನಾಟಕದಲ್ಲಿ ಡಿಜಿಟಲ್ ವಂಚನೆ ಪ್ರಕರಣಗಳಲ್ಲಿ ಗಣನೀಯ ಇಳಿಕೆ ಕಂಡುಬಂದಿದೆ. ಈ ಬಗ್ಗೆ ಸ್ವತಃ ಗೃಹ ಸಚಿವ ಪರಮೇಶ್ವರ್ ಅವರೇ ಅಂಕಿ-ಅಂಶ ಬಿಚ್ಚಿಟ್ಟಿದ್ದು, 2025ರಲ್ಲಿ ದಾಖಲಾದ ಪ್ರಕರಣಗಳ ಬಗ್ಗೆ ಉಲ್ಲೇಖಿಸಿದ್ದಾರೆ. ಹೆಚ್ಚುತ್ತಿರುವ ಸೈಬರ್ ಅಪರಾಧಗಳ ತಡೆಗೆ ದೇಶದಲ್ಲಿಯೇ ಮೊಟ್ಟ ಮೊದಲಬಾರಿಗೆ ಸೈಬರ್ ಕ್ರೈಮ್ ವಿಭಾಗಕ್ಕೆ ಕರ್ನಾಟಕದಲ್ಲಿ ಡಿಜಿಪಿ ನೇಮಕ ಮಾಡಲಾಗಿದೆ. ಸೆನ್ ಠಾಣೆಗಳನ್ನು ಮಾಡಿದ ಬಳಿಕ ಆನ್‌ಲೈನ್ ವಂಚನೆಗಳ ಬಗ್ಗೆ ದಾಖಲಾಗುತ್ತಿರುವ ಕೇಸ್‌ಗಳೂ ಹೆಚ್ಚಾಗಿವೆ. ಅಮೆರಿಕದಲ್ಲಿ ಇದ್ದವರನ್ನು ಡಿಜಿಟಲ್ ಅರೆಸ್ಟ್ ಮಾಡಿ ಅವರ ಅಕೌಂಟ್‌ನಿಂದ ಹಣ ತೆಗೆಯುತ್ತಿದ್ದಂಹ ಡಿಜಿಟಲ್ ವಂಚಕರನ್ನೂ ಕರ್ನಾಟಕ ಪೊಲೀಸರು ಬಂಧಿಸಿದ್ದಾರೆ.

ಇದೆಲ್ಲದರ ಪರಿಣಾಮವಾಗಿ ಪ್ರಸ್ತುತ ವರ್ಷ ರಾಜ್ಯದಲ್ಲಿ ಸೈಬರ್ ಕ್ರೈಮ್ ಪ್ರಕರಣಗಳು 13,000ಕ್ಕೆ ಇಳಿದಿವೆ ಎಂದು ಗೃಹ ಸಚಿವರು ತಿಳಿಸಿದ್ದಾರೆ. ಕಳೆದ ವರ್ಷಕ್ಕೆ ಹೋಲಿಸಿದರೆ 2025ರಲ್ಲಿ ಸುಮಾರು 9 ಸಾವಿರದಷ್ಟು ಸೈಬರ್ ಅಪರಾಧ ಪ್ರಕರಣಗಳು ಇಳಿಕೆಯಾಗಿವೆ.

ಆನ್‌ಲೈನ್ ವಂಚನೆಗೆ ಒಳಗಾದ ಸಂತ್ರಸ್ತರು 1930 ಸಂಖ್ಯೆಗೆ ಸೈಬರ್ ಕ್ರೈಮ್ ದೂರುಗಳನ್ನು ನೀಡಬಹುದು. 66 ಸಿಬ್ಬಂದಿ ಈ ಕರೆಗಳನ್ನು ಸ್ವೀಕರಿಸುವ ಕೆಲಸ ಮಾಡುತ್ತಿದ್ದು, ಸೈಬರ್ ಕ್ರೈಮ್ ನಿಯಂತ್ರಣಕ್ಕೆ ರಾಜ್ಯ ಸರ್ಕಾರ ಸಕಲ ಪ್ರಯತ್ನ ಮಾಡುತ್ತಿದೆ ಎಂದು ಗೃಹ ಸಚಿವ ಜಿ. ಪರಮೇಶ್ವರ್ ತಿಳಿಸಿದ್ದಾರೆ.

## ಮಹಿಳೆಯನ್ನು ಕಚ್ಚಿ ಕಚ್ಚಿ ಕೊಂದ ರಾಟ್ ವೀಲರ್

**ದಾವಣಗೆರೆ**: ರಾಟ್ ವೀಲರ್ ನಾಯಿ ದಾಳಿಗೆ ಮಹಿಳೆ ಬಲಿಯಾದ ಘಟನೆ ದಾವಣಗೆರೆ ಹೊರ ವಲಯದ ಹೊನ್ನೂರು ಗೊಲ್ಲರಹಟ್ಟಿಯಲ್ಲಿ ನಡೆದಿದೆ ನಾಯಿ ದಾಳಿಯಿಂದ ಸಾವನ್ನಪಿದ ಮಹಿಳೆಯನ್ನು ಅನಿತಾ (38) ಎಂದು ಗುರುತಿಸಲಾಗಿದೆ. ಕಳೆದ ರಾತ್ರಿ ಕಾರಿನಲ್ಲಿ ಬಂದ ಅಪರಿಚಿತರು 2 ರಾಟ್ ವೀಲರ್ ಜಾತಿಯ ನಾಯಿಗಳನ್ನು ಹೊನ್ನೂರು ಗೊಲ್ಲರಹಟ್ಟಿಯ ಬಳಿ ಬಿಟ್ಟು ಹೋಗಿದ್ದಾರೆ. ಅದೇ ಸಮಯದಲ್ಲಿ ಮನೆಯಿಂದ ಹೊರ ಬಂದ ಮಹಿಳೆ ಮೇಲೆ ಶ್ವಾನಗಳು ದಾಳಿ ನಡೆಸಿವೆ ರಕ್ತದ ಮಡುವಿನಲ್ಲಿ ಬಿದ್ದಿದ್ದ ಮಹಿಳೆಗೆ ಸ್ಥಳೀಯ ಆಸ್ಪತ್ರೆಯಲ್ಲಿ ಚಿಕಿತ್ಸೆ ಕೊಡಿಸಿ, ಹೆಚ್ಚಿನ ಚಿಕಿತ್ಸೆಗೆ ಬೆಂಗಳೂರಿಗೆ ಕರೆದೊಯ್ಯುವ ಮಾರ್ಗ ಮಧ್ಯೆಯೇ ಮೃತಪಟ್ಟಿದ್ದಾರೆ. ಶಿರಾ ತಾಲೂಕು ಅಸ್ಪತ್ರೆಯ ಶವಗಾರದಲ್ಲಿ ಮಹಿಳೆಯ ಮೃತದೇಹವನ್ನು ಶವಪರಿಕ್ಷೆ ನಡೆಸಲಾಗಿದೆ.

ಮಹಿಳೆಗೆ ಸುಮಾರು 50 ಕಡೆಗಳಲ್ಲಿ ನಾಯಿ ಕಚ್ಚಿದೆ ಎಂದು ತಿಳಿದು ಬಂದಿದೆ. ನಾಯಿಗಳು ಗ್ರಾಮದ ಜಮೀನಿನಲ್ಲೇ ಬೀಡು ಬಿಟ್ಟಿದ್ದವು. ಅವುಗಳನ್ನು ಹಿಡಿದು ಅವುಗಳ ಕಾಲಿಗೆ ಹಗ್ಗ ಬಿಗಿದು ಕೋಲಿಗೆ ಕಟ್ಟಿಕೊಂಡು ಗ್ರಾಮಸ್ಥರು ಎಳೆದುಕೊಂಡು ಹೋಗಿದ್ದಾರೆ.

Printed by: R Ramesh, Published by Abhishek D R On Behalf of Abhishek D R, Printed at Maruthi Enterprises. No.1159, Near Floor Mill, D Cross, Doddaballapura Town, Bengaluru rural, Karnataka - 561203, Published at No. 3769/1, Rajarathna Nivasa, KSRTC Layout, Near Ambedkar Stadium, Rayan Nagara, Nelamangala. Editor Abhishek D R.